ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೪

**ಪಟ್ಟಿ – ೧೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : ೨೪ನೇ ಮಾರ್ಚ್, ೨೦೨೦

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

---

## ಬೀದರ್ ಜಿಲ್ಲೆಯ ಪಟ್ಟಣ ಪಂಚಾಯಿತಿ ಪುರಸಭೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೫೦೪ (೧೭೭೮) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಒಟ್ಟು ಪಟ್ಟಣ ಪಂಚಾಯಿತಿಗಳು ಮತ್ತು ಪುರಸಭೆಗಳು ಎಷ್ಟು ; ಅವು ಯಾವುವು ; ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಿಂದ ಜಿಲ್ಲೆಯ ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ನಗರ ಸಭೆಗಳ ವತಿಯಿಂದ ಯಾವ ಯಾವ ಯೋಜನೆಗಳಿಂದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಗ್ರಾಮವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು

(ಇ) ಈ ಕಾಮಗಾರಿಗಳಿಗೆ ಕಳೆದ ಒಂದು ವರ್ಷದಿಂದ ಬಿಡುಗಡೆಯಾದ ಅನುದಾನ ಮತ್ತು ಖರ್ಚಾದ ಅನುದಾನ ಹಾಗೂ ಬಾಕಿ ಉಳಿದಿರುವ ಅನುದಾನ ಎಷ್ಟು ? (ಕಾಮಗಾರಿಗಳ/ ವಿವರಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ಸಹಕಾರ ಸಂಘಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೫೦೫ (೧೮೦೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಸಹಕಾರ ಸಂಘಗಳು ಹಾಗೂ ಬ್ಯಾಂಕುಗಳು ಇವೆ ; ಅವು ಯಾವುವು ಮತ್ತು ಎಲ್ಲೆಲ್ಲಿ ಇವೆ ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಎಷ್ಟು ಜನರಿಗೆ ಯಾವ ಯಾವ ಸಹಕಾರ ಬ್ಯಾಂಕುಗಳಿಂದ ಸಾಲ ವಿತರಿಸಲಾಗಿದೆ ; (ಬ್ಯಾಂಕುವಾರು, ಗ್ರಾಮವಾರು, ವಿವರ ನೀಡುವುದು)

(ಇ) ಸಾಲ ಪಡೆದ ಎಷ್ಟು ರೈತರ ಸಾಲ ಮನ್ನಾ ಆಗಿದೆ ; ಸಾಲ ಮನ್ನಾ ಆಗದೆ ಬಾಕಿ ಇರುವ ರೈತರ ಸಂಖ್ಯೆ ಎಷ್ಟು ? (ಬ್ಯಾಂಕುವಾರು, ರೈತವಾರು ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೫೦೬ (೧೭೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೨ ವರ್ಷದಲ್ಲಿ ತೋಟಗಾರಿಕೆ ಇಲಾಖೆಯಿಂದ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳ ಅಡಿಯಲ್ಲಿ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಿದೆ ;

(ಆ) ಯಾವ ಯಾವ ಯೋಜನೆಗಳಿಂದ ಎಷ್ಟೆಷ್ಟು ಸಬ್ಸಿಡಿಯಲ್ಲಿ ರೈತರಿಗೆ ಸಾಲ ಕೊಡಲಾಗಿದೆ ಇದರ ಸದುಪಯೋಗ ಪಡೆದ ರೈತರ ಸಂಖ್ಯೆ ಎಷ್ಟು ? (ಗ್ರಾಮವಾರು, ಫಲಾನುಭವಿವಾರು ಯೋಜನಾವಾರು ಅನುದಾನದ ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ಸಹಕಾರ ಇಲಾಖೆಯಿಂದ ವಿವಿಧ ಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೫೦೭ (೧೮೦೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಇಲಾಖೆಯಲ್ಲಿರುವ ವಿವಿಧ ಯೋಜನೆಗಳಾವುವು ; (ಯೋಜನಾವಾರು ಮಾಹಿತಿ ನೀಡುವುದು)

(ಆ) ಕಳೆದ ಒಂದು ವರ್ಷದಿಂದ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳಿಂದ ಎಷ್ಟೆಷ್ಟು ಫಲಾನುಭವಿಗಳು ಯಾವ ಯಾವ ಸೌಲಭ್ಯಗಳನ್ನು ಪಡೆದಿದ್ದಾರೆ ? (ಯೋಜನಾವಾರು, ತಾಲ್ಲೂಕುವಾರು ಫಲಾನುಭವಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ಸ್ಮಾರ್ಟ್‌ಸಿಟಿ ಯೋಜನೆ ಕಾಮಗಾರಿಗಳ ಕುರಿತು

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) :–**

೧೫೦೮ (೧೮೦೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಮಹಾನಗರ ಪಾಲಿಕೆಯಲ್ಲಿ ಸ್ಮಾರ್ಟ್‌ಸಿಟಿ ಯೋಜನೆಯಲ್ಲಿ ಎಷ್ಟು ವಾರ್ಡಿನ ಯಾವ ಯಾವ ಕಾಮಗಾರಿಗಳನ್ನು ಯಾವ ಯಾವ ಕಂಪನಿ/ಗುತ್ತಿಗೆದಾರರಿಂದ ನಡೆಸಲಾಗುತ್ತಿದೆ ; ಈ ಹಿಂದೆ ಸ್ಮಾರ್ಟ್‌ಸಿಟಿ ಅನುಮೋದನೆಗೆ ಕಳುಹಿಸುವಾಗ ಕೈಗೊಳ್ಳಬೇಕಾದ ಕಾಮಗಾರಿಯ ಹೆಸರು ಮತ್ತು ಮೊತ್ತ ಹಾಗೂ ಸ್ಮಾರ್ಟ್‌ಸಿಟಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಅನುಮೋದನೆಗೊಂಡ ನಂತರ ವಿಂಗಡಣೆಯಾದ ಮೊತ್ತವೆಷ್ಟು; (ವಾರ್ಡ್‌ವಾರು ವಿವರ ನೀಡುವುದು)

(ಆ) ಆಯ್ಕೆ ಮಾಡಿರುವ ವಾರ್ಡಿನಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲು ಕ್ರಿಯಾ ಯೋಜನೆ ನಿಗದಿಪಡಿಸಲಾಗಿದೆ ; (ಲೆಕ್ಕಶೀರ್ಷಿಕೆವಾರು ವಿವರ ಒದಗಿಸುವುದು)

(ಇ) ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ/ಕಂಪನಿಗಳಿಗೆ ನಿಗದಿಪಡಿಸಿದ ಕಾಲಾವಕಾಶವೆಷ್ಟು ; ನಿಗದಿತ ಕಾಲಾವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸದಿರುವ ಗುತ್ತಿಗೆದಾರರ/ ಕಂಪನಿಗಳಾವುವು ; ಯಾವ ಯಾವ ಕಾರಣಗಳಿಂದ ಕಾಮಗಾರಿ ಪೂರ್ಣಗೊಳಿಸಿರುವುದಿಲ್ಲ ಮತ್ತು ನಿಗದಿತ ಕಾಲಾವಧಿಯೊಳಗೆ ಪೂರ್ಣಗೊಳಿಸದ ಕಂಪನಿ/ಗುತ್ತಿಗೆದಾರರ ಮೇಲೆ ಕೈಗೊಂಡ ಕ್ರಮಗಳ ಬಗ್ಗೆ ವಿವರ ಒದಗಿಸುವುದು ;

(ಈ) ಸ್ಮಾರ್ಟ್‌ಸಿಟಿಯಲ್ಲಿ ಕೈಗೊಳ್ಳಬೇಕಾದ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ನಿಗದಿಪಡಿಸಿದ ಕಾಲಾವಕಾಶವೆಷ್ಟು ; ಕಾಮಗಾರಿ ಪೂರ್ಣಗೊಳಿಸದೇ ಇರುವ ಕಡೆ ಸ್ಮಾರ್ಟ್‌ಸಿಟಿ ಕಛೇರಿಯಿಂದ ನಿಯೋಜಿತ ಇಂಜಿನೀಯರ್‌ಗಳಿಂದ ಪಡೆದ ಮಾಹಿತಿ ಹಾಗೂ ಇಂಜಿನೀಯರುಗಳ ಹೆಸರು ಮತ್ತು ಪದನಾಮವೇನು ;

(ಉ) ಕಾಮಗಾರಿ ಕಳಪೆ ಹಾಗೂ ಅವೈಜ್ಞಾನಿಕಾಗಿ ಮಾಡಿರುವ ಬಗ್ಗೆ ಸ್ಥಳೀಯರಿಂದ ಹಲವಾರು ದೂರುಗಳು ಬಂದಿದ್ದು, ಇವುಗಳ ಬಗ್ಗೆ ತೆಗೆದುಕೊಂಡ ಕ್ರಮವೇನು ; ಹಾಗೂ ಕಾಮಗಾರಿಯ ಸ್ಥಳ ವೀಕ್ಷಣೆ ಮಾಡಿ ಸರ್ಕಾರಕ್ಕೆ ವರದಿ ನೀಡುವವರು ಯಾರು ?

## ಗುತ್ತಿಗೆದಾರರ ಹಾವಳಿ ತಡೆಗಟ್ಟುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦೯ (೧೭೮೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ನೀರಿನ ಸಂಪರ್ಕ ಮತ್ತು ಒಳಚರಂಡಿ ಸಂಪರ್ಕವನ್ನು ಪಡೆಯುವ ಮತ್ತು ಹಿಂಪಡೆಯುವ ಸಂದರ್ಭದಲ್ಲಿ ಖಾಸಗಿ ಗುತ್ತಿಗೆದಾರರು ಕಡತ ಸಲ್ಲಿಸಿದ ನಂತರ ಕ್ರಮಕೈಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಂಡಳಿ ವತಿಯಿಂದ ನೀರಿನ ಸಂಪರ್ಕ ಮತ್ತು ಒಳಚರಂಡಿ ಸಂಪರ್ಕವನ್ನು ಪಡೆಯುವವರಿಂದ ಗುತ್ತಿಗೆದಾರರು ಹೆಚ್ಚಿನ ಹಣ ವಸೂಲು ಮಾಡುತ್ತಿರುವುದು ಹಾಗೂ ಇದರಲ್ಲಿ ಅಧಿಕಾರಿ/ನೌಕರರುಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ರೀತಿ ಹಣ ವಸೂಲು ಮಾಡುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಗುತ್ತಿಗೆದಾರರು, ಕಡತಕ್ಕೆ ಸಹಿ ಹಾಕಿದ ನಂತರ ಸಂಬಂಧಪಟ್ಟ ಇಂಜಿನಿಯರ್‌ಗಳು ಆ ಕಡತದ ಮೇಲೆ ಕ್ರಮಕೈಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ರೀತಿ ಕ್ರಮಕೈಗೊಳ್ಳುತ್ತಿರುವ ಅಧಿಕಾರಿ/ನೌಕರರ ಮೇಲೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು)

(ಉ) ಹೆಚ್ಚಿನ ಹಣ ವಸೂಲಿ ಮಾಡುತ್ತಿರುವ ಹಾಗೂ ಈ ರೀತಿ ಕ್ರಮ ಕೈಗೊಳ್ಳುತ್ತಿರುವ ಗುತ್ತಿಗೆದಾರರ ಮೇಲೆ ಸರ್ಕಾರ ಕ್ರಮ ಕೈಗೊಳ್ಳಲು ಸಾಧ್ಯವೇ ; ಹಾಗಿದ್ದಲ್ಲಿ, ಇವರುಗಳ ಮೇಲೆ ಸರ್ಕಾರ ಯಾವ ರೀತಿಯ ಕ್ರಮಕೈಗೊಳ್ಳುವುದು ; ಇವರ ಗುತ್ತಿಗೆ ಅವಧಿಯನ್ನು ಕೊನೆಗೊಳಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಊ) ಖಾಯಂ ನೌಕರರ ಮುಖಾಂತರ ನೀರಿನ ಸಂಪರ್ಕ ಮತ್ತು ಒಳಚರಂಡಿ ಸಂಪರ್ಕವನ್ನು ಕಲ್ಪಿಸಲು ಸರ್ಕಾರ ಕ್ರಮಕೈಗೊಳ್ಳುವುದು ಯಾವಾಗ ? (ವಿವರ ನೀಡುವುದು)

## ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆಯಡಿ ಮಂಜೂರಾದ ಅನುದಾನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೧೦ (೧೭೮೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಳೆದ ೩ ವರ್ಷಗಳಲ್ಲಿ ಮಂಡ್ಯ ಜಿಲ್ಲೆಗೆ ನಗರಾಭಿವೃದ್ಧಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಯಡಿ ಮಂಜೂರಾದ ಅನುದಾನದ ಮೊತ್ತವೆಷ್ಟು ;

(ಆ) ಕಳೆದ ೩ ವರ್ಷಗಳಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ಮಂಜೂರಾದ ಅನುದಾನದಡಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಖರ್ಚಾಗಿರುವ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿವೆ ; ಆ ಪೈಕಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳಾವುವು ? (ಕಾಮಗಾರಿವಾರು ಮಾಹಿತಿ ನೀಡುವುದು)

## ಸಹಕಾರ ಸಂಘಗಳ ಲೆಕ್ಕ ತಪಾಸಣೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೧೧ (೧೭೮೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಸಹಕಾರ ಸಂಘಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿನ ಎಷ್ಟು ಸಹಕಾರ ಸಂಘಗಳಲ್ಲಿ ವಾರ್ಷಿಕ ಲೆಕ್ಕ ತಪಾಸಣೆ ಮಾಡಲಾಗಿದೆ ಮತ್ತು ಎಷ್ಟು ಬಾಕಿಯಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ವಾರ್ಷಿಕ ಲೆಕ್ಕ ತಪಾಸಣೆ ಮಾಡಿಸದ ಸಹಕಾರ ಸಂಘಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ವಾರ್ಷಿಕ ಲೆಕ್ಕ ತಪಾಸಣೆಯಲ್ಲಿನ ನ್ಯೂನ್ಯತೆಗಳಿಗೆ ಅನುಪಾಲನಾ ವರದಿ ಸಲ್ಲಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೧೨ (೧೭೮೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯಲ್ಲಿರುವ ವಿವಿಧ ಯೋಜನೆಗಳಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದ ತೋಟಗಾರಿಕೆ ಇಲಾಖೆಯಡಿಯಲ್ಲಿನ ಯೋಜನೆಗಳಿಗೆ ವಿವಿಧ ಲೆಕ್ಕ ಶೀರ್ಷಿಕೆಯಡಿ ಬಿಡುಗಡೆಯಾದ ಅನುದಾನ ಎಷ್ಟು ; ಅದರಲ್ಲಿ ಮಂಜೂರಾದ ಅನುದಾನ ಎಷ್ಟು ; ಜಿಲ್ಲಾವಾರು ಮಾಹಿತಿ ನೀಡುವುದು ; (ಪ್ರತ್ಯೇಕವಾಗಿ ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಿಂದ ಅನುದಾನ ಪಡೆದ ಫಲಾನುಭವಿಗಳೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳಿಗೆ ಜಲ್ಲಿ ಮರಳು ದೊರೆಯದಿರುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೫೧೩ (೧೮೨೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳಿಗೆ ಹಾಗೂ ಬಡವರು ನಿರ್ಮಿಸಿರುವ ಮನೆಗಳ ನಿರ್ಮಾಣಕ್ಕೆ ಜಲ್ಲಿ, ಮರಳು ಕಲ್ಲು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಮರಳು ಬದಲಾಗಿ ಎಂ ಸ್ಯಾಂಡ್ ಉಪಯೋಗಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ?

## ಕೈಗಾರಿಕಾ ಪ್ರದೇಶವನ್ನು ಹಂಚಿಕೆ ಮಾಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೫೧೪ (೧೮೨೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷಗಳಲ್ಲಿ ಕೈಗಾರಿಕಾ ಪ್ರದೇಶವನ್ನು ಹಂಚಿಕೆ ಮಾಡುವಂತೆ ಕೋರಿದ ಕಂಪನಿಗಳೆಷ್ಟು ಮತ್ತು ಅವು ಯಾವುವು ;

(ಆ) ಕೈಗಾರಿಕಾ ಉದ್ದೇಶಕ್ಕಾಗಿ ಸರ್ಕಾರವು ಎಲ್ಲೆಲ್ಲಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆ ;

(ಇ) ಸ್ವಾಧೀನಪಡಿಸಿಕೊಂಡ ಭೂಮಿಗೆ ಸರ್ಕಾರ ನಿಗದಿಪಡಿಸಿದ ಮಾನದಂಡ ನಿಗದಿ ಹಂಚಿಕೆ ಮತ್ತು ಕ್ರಮಗಳೇನು ;

(ಈ) ಹಂಚಿಕೆ ಪಡೆದ ಕಂಪನಿಗಳು ಕಾರ್ಯಾರಂಭ ಮಾಡಿರುತ್ತವೆಯೇ ; ಮಾಡಿದ್ದಲ್ಲಿ, ಸ್ಥಳೀಯ ಕೆಲಸಗಾರರನ್ನು ನೇಮಿಸಿಕೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ಶೀಘ್ರವಾಗಿ ಪ್ರಾರಂಭಿಸುವ ಬಗ್ಗೆ ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಲಾಗಿದೆಯೇ ?

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಪ್ರೋತ್ಸಾಹದ ಯೋಜನೆ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೫೧೫ (೧೮೨೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಪ್ರೋತ್ಸಾಹಕ್ಕೆ ಯೋಜನೆ ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ, ಬಳಸಿದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸ್ಥಾಪನೆಯಾದ ಕೈಗಾರಿಕೆಗಳ ಹಾಗೂ ಅವುಗಳ ಮೂಲಕ ಉದ್ಯೋಗ ನೀಡಿರುವ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಕೈಗಾರಿಕೆ ಸ್ಥಾಪನೆಗೆ ಒದಗಿಸಲಾಗಿರುವ ಜಮೀನು ಮತ್ತು ಮೂಲಭೂತ ಸೌಕರ್ಯಗಳ ಸಂಪೂರ್ಣ ಮಾಹಿತಿಯನ್ನು ನೀಡುವುದು ?

## ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೫೧೬ (೧೮೩೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳಾವುವು ; (ಈ ಸಾಲ ಯೋಜನೆಯ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ (ಸಬ್ಸಿಡಿ) ಹೊಂದಿರುವ ಯೋಜನೆಗಳಾವುವು ; (ಈ ಯೋಜನೆಗಳ ರೂಪುರೇಷೆಗಳ ಮಾಹಿತಿ ನೀಡುವುದು)

(ಇ) ಈ ಸಾಲ ಯೋಜನೆಯ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರೈತರಿಗಾಗಿ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತಿದೆ ; ವಾಹನ ಸಾಲ ಯೋಜನೆಯಲ್ಲಿ ಸಬ್ಸಿಡಿ ನೀಡಲಾಗುತ್ತಿದೆಯೇ ?

## ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರುಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೫೧೭ (೧೮೬೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಖಾಯಂ ಕಾರ್ಮಿಕರ ಸಂಖ್ಯೆ ಎಷ್ಟು ಹಾಗೂ ಗುತ್ತಿಗೆ ಕಾರ್ಮಿಕರ ಸಂಖ್ಯೆ ಎಷ್ಟು ; ಬುದ್ದನ್ನಿ ಮತ್ತು ಊಟಿಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ರಾಯಚೂರು ಜಿಲ್ಲೆಯ ಬುದ್ದಿನ್ನಿ ಚಿನ್ನದ ಗಣಿ ಉದ್ದಿಮೆಯಿಂದ ಆ ಗ್ರಾಮಸ್ಥರಿಗೆ ಆಗುವ ತೊಂದರೆ ನಿರ್ವಾಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಸದರಿ ಗ್ರಾಮವನ್ನು ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯ ಬುದ್ದಿನ್ನಿ ಚಿನ್ನದ ಗಣಿ ಸ್ಥಾಪನೆಗೆ ಭೂ ಸ್ವಾಧೀನ ಮಾಡಿಕೊಂಡಿರುವ ಭೂಮಿ ಎಷ್ಟು ; ಸದರಿ ಭೂ ವಂಚಿತ ರೈತರಿಗೆ ಸರ್ಕಾರ ನೀಡಿರುವ ಸೌಲಭ್ಯಗಳು ಏನು ?

## ಮಾನ್ವಿ ಪಟ್ಟಣಕ್ಕೆ ಮಂಜೂರಾಗಿರುವ ಕುಡಿಯುವ ನೀರಿನ ಸರಬರಾಜು ಯೋಜನೆ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೧೮ (೧೮೭೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣಕ್ಕೆ ೨೪/೭ ಕುಡಿಯುವ ನೀರಿನ ಸರಬರಾಜು ಯೋಜನೆಯ ಕಾಮಗಾರಿಯು ಯಾವ ವರ್ಷದಲ್ಲಿ ಮಂಜೂರಾಗಿದೆ ; ಈ ಯೋಜನೆಗೆ ಮಂಜೂರಾಗಿರುವ ಅನುದಾನ ಎಷ್ಟು ; ಸದರಿ ಯೋಜನೆಗೆ ಖರ್ಚು ಮಾಡಿರುವ ಅನುದಾನ ಎಷ್ಟು ; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿ ಇದೆ ; ಸದರಿ ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ ;

(ಆ) ಮಾನ್ವಿ ಪಟ್ಟಣದಲ್ಲಿ ಕುಡಿಯುವ ನೀರಿನ ವಿತರಣೆ ಜಾಲಗಳನ್ನು ಬದಲಾವಣೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ; ಈ ಯೋಜನೆಯ ಅಂದಾಜು ಮೊತ್ತ ಎಷ್ಟು ?

## ರೈತರುಗಳಿಗೆ ಬಡ್ಡಿ ರಹಿತ ಸಾಲ ನೀಡುವ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೧೯ (೧೮೫೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿರುವ ಆರ್‌ಡಿಸಿಸಿ ಬ್ಯಾಂಕ್ ವತಿಯಿಂದ ರೂ.೩ ಲಕ್ಷದವರೆವಿಗೂ ಬಡ್ಡಿ ರಹಿತ ಸಾಲ ಪಡೆದ ಒಟ್ಟು ರೈತರುಗಳು ಎಷ್ಟು ; ಸಾಲದ ಮೊತ್ತ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿರುವ ರೈತರುಗಳಿಗೆ ರೂ.೩ ಲಕ್ಷದ ಮಿತಿವರೆವಿಗೂ ಸಾಲ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೯–೨೦ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿರುವ ವಿಎಸ್‌ಎಸ್‌ಎನ್ ಸಹಕಾರ ಸಂಘಗಳಿಗೆ ಆರ್‌ಡಿಸಿಸಿ ಬ್ಯಾಂಕ್ ಹಾಗೂ ರಾಷ್ಟ್ರೀಯ ಬ್ಯಾಂಕುಗಳಿಂದ ನೀಡಿರುವ ಸಾಲದ ಮೊತ್ತ ಎಷ್ಟು ; ಆರ್‌ಡಿಸಿಸಿ ಬ್ಯಾಂಕ್ ಹಾಗೂ ರಾಷ್ಟ್ರೀಯ ಬ್ಯಾಂಕುಗಳಿಂದ ಸಾಲ ಪಡೆದ ರೈತರ ಸಂಖ್ಯೆ ಎಷ್ಟು ; ಇದರ ಅಂದಾಜು ಮೊತ್ತ ಎಷ್ಟು ?

## ರಾಯಚೂರಿನಲ್ಲಿ ಇರುವ ಗ್ರೋತ್‌ಸೆಂಟರ್ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨೦ (೧೮೫೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನಲ್ಲಿ ನೂತನವಾಗಿ ಪ್ರಾರಂಭಿಸಿರುವ ಬೃಹತ್ ಕೈಗಾರಿಕೆಗಳು ಯಾವುವು; ಪ್ರಸ್ತುತ ಯಾವ ಪ್ರದೇಶಗಳಲ್ಲಿ ಪ್ರಾರಂಭಿಸಲಾಗಿವೆ ; ಇವುಗಳಿಗೆ ಪ್ರೋತ್ಸಾಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಗ್ರೋತ್‌ಸೆಂಟರ್‌ನಲ್ಲಿ ಇರುವ ಬೃಹತ್ ಕೈಗಾರಿಕೆಗಳು ಯಾವುವು ; ಇವು ಪ್ರಸ್ತುತ ಚಾಲನೆಯಲ್ಲಿ ಇವೆಯೇ ; ಚಾಲನೆಯಲ್ಲಿದ್ದರೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕ ಸಂಖ್ಯೆ ಎಷ್ಟು ;

(ಇ) ಈ ಗ್ರೋತ್‌ಸೆಂಟರ್‌ನಲ್ಲಿ ನೀರು ಹಾಗೂ ವಿದ್ಯುತ್ ಸರಬರಾಜು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮಂಗಳೂರಿನಲ್ಲಿ ಕೈಗಾರಿಕೆ ಕೇಂದ್ರದ ಅಭಿವೃದ್ಧಿ ಮತ್ತು ಹೊಸ ಯೋಜನೆ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೨೧ (೧೭೬೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರಿನಲ್ಲಿ ಕೈಗಾರಿಕಾ ಕೇಂದ್ರದ ಅಭಿವೃದ್ಧಿ ಮತ್ತು ಹೊಸ ಯೋಜನೆಗಳ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆಗಳು ಇವೆಯೇ ; ಇದ್ದಲ್ಲಿ, ಅವು ಯಾವುವು ; (ವಿವರ ನೀಡುವುದು)

(ಆ) ಮಂಗಳೂರಿನ MRPL/SEZ ಕೈಗಾರಿಕೆಯಲ್ಲಿ ವಿಸ್ತರಣೆ ಭೂಮಿ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ವಿವರ ನೀಡುವುದು ;

(ಇ) ೨೦೧೮–೧೯, ೨೦೧೯–೨೦ರಲ್ಲಿ ಕೈಗಾರಿಕೆಗಾಗಿ ಎಷ್ಟು ಭೂಮಿಯನ್ನು ವಶಪಡಿಸಲಾಗಿದೆ ; ಎಷ್ಟು ಬೆಲೆಯನ್ನು ನಿಗದಿಪಡಿಸಲಾಗಿದೆ ; ಭೂಮಿಯನ್ನು ಸ್ವಾಧೀನಪಡಿಸಲಾಗಿದೆಯೇ ; (ವಿವರ ನೀಡುವುದು)

(ಈ) ಬೈಕಂಪಾಡಿ ಕೈಗಾರಿಕಾ ಪ್ರದೇಶದ ಎಷ್ಟು ಪ್ರಕರಣಗಳು ಅನ್ಯ ಉದ್ದೇಶಕ್ಕಾಗಿ ಭೂಮಿಯನ್ನು ಬಳಕೆ ಮಾಡಿರುವುದು ದಾಖಲಾಗಿವೆ ? (ವಿವರ ನೀಡುವುದು)

## ಬಿ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೨೨ (೧೭೯೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಪಿ.ಎಲ್. ನಲ್ಲಿ ಎಷ್ಟು ಬೋಗಸ್ ಕಾರ್ಡ್‌ಗಳನ್ನು ಗುರುತಿಸಲಾಗಿದೆ ; ೨೦೧೮–೧೯, ೨೦೧೯–೨೦, ೨೦೨೦–೨೧ರಲ್ಲಿ ಗುರುತಿಸಲಾದ ಕಾರ್ಡ್‌ಗಳು ಎಷ್ಟು ;

(ಆ) ಆದಾಯ ಮಿತಿ ಕಡಿಮೆಗೊಳಿಸುವ ಆಲೋಚನೆ ಸರ್ಕಾರದ ಮುಂದೆ ಇದೆಯೇ ; (ವಿವರ ನೀಡುವುದು)

(ಇ) ೨೦೧೯–೨೦ರಲ್ಲಿ ಎಷ್ಟು ಬಿ.ಪಿ.ಎಲ್ ಹೊಸ ಕಾರ್ಡ್‌ಗಳನ್ನು ರಾಜ್ಯಾದ್ಯಂತ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಸರ್ಕಾರದಿಂದ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತದೆ ? (ವಿವರ ನೀಡುವುದು)

## ಕಿನ್ನಿಗೋಳಿ ಗ್ರಾಮಪಂಚಾಯಿತಿಯನ್ನು ನಗರ ಪಂಚಾಯತ್‌ನ್ನಾಗಿ ಮಾಡುವ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೨೩ (೧೭೯೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಕಿನ್ನಿಗೋಳಿ ಗ್ರಾಮ ಪಂಚಾಯ್ತಿಯನ್ನು ನಗರ ಪಂಚಾಯ್ತಿಯನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ಕಿನ್ನಿಗೋಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಜನಸಂಖ್ಯೆ ಎಷ್ಟು; ಮತ್ತು ಭೌಗೋಳಿಕ ವಿಸ್ತೀರ್ಣ ಎಷ್ಟು; (ವಿವರ ನೀಡುವುದು)

(ಇ) ಕಿನ್ನಿಗೋಳಿ ಗ್ರಾಮ ಪಂಚಾಯತ್‌ನ್ನು ನಗರ ಪಂಚಾಯತ್ ಆಗಿ ಪರಿವರ್ತನೆ ಮಾಡಲು ಗ್ರಾಮ ಪಂಚಾಯತ್‌ಯಿಂದ ಬೇಡಿಕೆ ಬಂದಿದೆಯೇ ; ಬಂದಿದ್ದಲ್ಲಿ, ಅದರ ವಿವರ ನೀಡುವುದು ; ಗ್ರಾಮ ಪಂಚಾಯತ್‌ಗಿರುವ ಆದಾಯ ಎಷ್ಟು;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳನ್ನು ನಗರ ಪಂಚಾಯತ್‌ಗಳು/ ಪುರಸಭೆ/ ನಗರಸಭೆ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ? (ವಿವರ ನೀಡುವುದು)

## ಮಹಾನಗರಪಾಲಿಕೆಗಳ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೨೪ (೧೭೯೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ರ ಸಾಲಿನ ಬಜೆಟ್‌ನಲ್ಲಿ ರಾಜ್ಯದಲ್ಲಿರುವ ಮಹಾನಗರ ಪಾಲಿಕೆಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ ; (ವಿವರ ನೀಡುವುದು)

(ಆ) ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಯೋಜನೆಗಳಿಗಾಗಿ ಮೀಸಲಿಡಲು ಉದ್ದೇಶಿಸಲಾಗಿರುವ ಅನುದಾನದ ಮೊತ್ತ ಎಷ್ಟು; (ನಗರಪಾಲಿಕೆವಾರು ವಿವರ ನೀಡುವುದು)

(ಇ) ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ತುಂಬೆ ಕಿಂಡಿ ಅಣೆಕಟ್ಟಿನಿಂದ ನೀರು ಸರಬರಾಜುಗಾಗಿ ಹಣ ಮೀಸಲಿಡಲಾಗಿದೆಯೇ ; ಇದ್ದಲ್ಲಿ, ವಿವರ ನೀಡುವುದು ?

## ಯುವಕ–ಯುವತಿಯರಿಗೆ ಕೈಗಾರಿಕೆ ತರಬೇತಿ ನೀಡಿರುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೫೨೫ (೧೯೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೦೩ ವರ್ಷಗಳಲ್ಲಿ ಎಷ್ಟು ಯುವಕ/ ಯುವತಿಯರಿಗೆ ಕೈಗಾರಿಕಾ ತರಬೇತಿ ನೀಡಲಾಗಿದೆ ; ಎಷ್ಟು ಗ್ರಾಮಾಂತರ ಯುವಕ / ಯುವತಿಯರಿಗೆ ಕೈಗಾರಿಕಾ ತರಬೇತಿ ನೀಡಲಾಗಿದೆ ; (ವಿವರ ನೀಡುವುದು)

(ಆ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೈಗಾರಿಕಾ ಪ್ರದೇಶದ ಒಟ್ಟು ವಿಸ್ತೀರ್ಣವೆಷ್ಟು ; ಇದರಲ್ಲಿ , ಕೈಗಾರಿಕೆಗಳಿಗಾಗಿ ಹಂಚಿಕೆಯಾದ ನಿವೇಶನಗಳು ಎಷ್ಟು ;

(ಇ) ಸದರಿ ಕೈಗಾರಿಕಾ ಪ್ರದೇಶದಲ್ಲಿ ಸಾಮಾನ್ಯ ತ್ಯಾಜ್ಯ ಸಂಸ್ಕರಣಾ ಘಟಕ ಸ್ಥಾಪಿಸಲಾಗಿದೆಯೇ ; ಎಷ್ಟು ಪ್ರದೇಶಗಳಲ್ಲಿ ಸ್ಥಾಪಿಸಿರುವುದಿಲ್ಲ ; ಇಲ್ಲದಿದ್ದಲ್ಲಿ , ಯಾವಾಗ ಸ್ಥಾಪಿಸಲಾಗುವುದು ? (ವಿವರ ನೀಡುವುದು)

## ರೈತರಿಗೆ ಟ್ರ್ಯಾಕ್ಟರ್ ಖರೀದಿಸಲು ಸಹಾಯ ಧನದ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೫೨೬ (೧೮೫೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಿಂದ ತೋಟಗಾರಿಕೆ ಇಲಾಖೆ ವತಿಯಿಂದ ರಾಜ್ಯದ ಎಷ್ಟು ರೈತರಿಗೆ ಟ್ರ್ಯಾಕ್ಟರ್ ಖರೀದಿಸಲು ಸಹಾಯ ಧನವನ್ನು ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು);

(ಆ) ಈ ಅವಧಿಯಲ್ಲಿ ಟ್ರ್ಯಾಕ್ಟರ್ ಖರೀದಿಸಲು ಸಹಾಯಕ ಧನ ಕೋರಿ ಫಲಾನುಭವಿಗಳು ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು)

(ಇ) ಈ ಫಲಾನುಭವಿಗಳ ಪೈಕಿ ಎಷ್ಟು ರೈತರುಗಳಿಗೆ ಟ್ರ್ಯಾಕ್ಟರ್ ಖರೀದಿಸಲು ಸಹಾಯ ಧನವನ್ನು ನೀಡಲಾಗಿದೆ; ಸಹಾಯ ಧನದ ಮೊತ್ತವೆಷ್ಟು ? (ವಿವರ ನೀಡುವುದು)

## ಅನ್ನಭಾಗ್ಯ ಯೋಜನೆಯ ಪಡಿತರ ಪ್ರಮಾಣ ಕಡಿತಗೊಳಿಸಿದ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೫೨೭ (೧೮೫೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅನ್ನಭಾಗ್ಯ ಯೋಜನೆಯನ್ನು ಜಾರಿಗೊಳಿಸಿದ ಪ್ರಾರಂಭದಲ್ಲಿ ನೀಡುತ್ತಿದ್ದ ಪಡಿತರ ಪ್ರಮಾಣವನ್ನು ಇತ್ತೀಚೆಗೆ ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ರೀತಿ ಕಡಿತಗೊಳಿಸಲು ಕಾರಣಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಗಣಿಗಾರಿಕೆ ಪರವಾನಗಿ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೫೨೮ (೧೮೫೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಲ್ಲಿ ರಾಜ್ಯದಲ್ಲಿ ಗಣಿಗಾರಿಕೆ ಪರವಾನಿಗೆ ಪಡೆಯಲು ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಎಷ್ಟು ಅರ್ಜಿಗಳು ವಿಲೇವಾರಿಯಾಗಿದೆ; ಎಷ್ಟು ಅರ್ಜಿಗಳನ್ನು ಇನ್ನೂ ಬಾಕಿ ಇಡಲಾಗಿದೆ ; ಇದಕ್ಕೆ ಕಾರಣವೇನು ; (ಸಂಪೂರ್ಣ ವಿವರ ನೀಡುವುದು)

(ಆ) ಹೊಸದಾಗಿ ಗಣಿಗಾರಿಕೆ ಮಾಡಲು ಇರುವ ಮಾನದಂಡಗಳೇನು ; ಗಣಿಗಾರಿಕೆ ನಡೆಸಲು ಪರವಾನಿಗೆದಾರರು ಹೊಂದಬೇಕಾದ ಅರ್ಹತೆಗಳೇನು ;

(ಇ) ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ನಡೆಸುತ್ತಿರುವುದಕ್ಕೆ ಸಂಬಂಧಿಸಿದಂತೆ ದಾಖಲಾದ ದೂರುಗಳೆಷ್ಟು; ಇದರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೫೨೯ (೧೮೪೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ರಾಜ್ಯ ಸರ್ಕಾರವು ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡುವ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಎಷ್ಟು ರೈತರಿಗೆ ಅನುಕೂಲ ಮಾಡಿಕೊಟ್ಟಿದೆ ;

(ಆ) ಈ ಯೋಜನೆಯಡಿಯಲ್ಲಿ ನೀಡುವ ಸಾಲದ ಗರಿಷ್ಠ / ಕನಿಷ್ಠ ಮೊತ್ತ ಎಷ್ಟು ;

(ಇ) ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಈ ಯೋಜನೆ ಲಾಭ ಪಡೆದ ರೈತರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಸರ್ಕಾರವು ಎಷ್ಟು ರೈತರಿಗೆ ಸಾಲ ಮನ್ನಾ ಮಾಡಿದೆ; ಸಾಲ ಮನ್ನಾ ಮಾಡಲು ಸರ್ಕಾರವು ವಿಧಿಸಿದ ಮಾನದಂಡವೇನು ? (ರೈತರ ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳಿಗೆ ಬೇರೆ ಇಲಾಖೆಯಿಂದ ನಿಯೋಜನೆ ಬಂದಿರುವ ನೌಕರರ ಕುರಿತು

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೩೦ (೧೭೬೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪೌರಾಡಳಿತ ಇಲಾಖೆಯ ಅಡಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳಿಗೆ ಬೇರೆ ಇಲಾಖೆಗಳಿಂದ "ಸಿ" ದರ್ಜೆಯ ನೌಕರರು ನಿಯೋಜನೆ ಮೇರೆಗೆ ಬಂದು ಆ ಸಂಸ್ಥೆಗಳ ಮುಖ್ಯಾಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಅಂತಹ ನೌಕರರುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ನಿಯೋಜನೆ ಎಷ್ಟು ವರ್ಷಗಳ ಅವಧಿಗೆಂದು ಷರತ್ತು ವಿಧಿಸಲಾಗಿದೆ ;

(ಇ) ಈ ಸಂಸ್ಥೆಗಳಲ್ಲಿ ಸುಮಾರು ೧೦ ರಿಂದ ೧೫ ಕೋಟಿ ರೂಪಾಯಿಗಳ ಅನುದಾನವನ್ನು ವ್ಯಯಿಸುವ ಅಧಿಕಾರವಿರುವುದರಿಂದ ಕನಿಷ್ಟ ಪಕ್ಷ ಆ ಸಂಸ್ಥೆಗಳಿಗೆ ದ್ವಿತೀಯ ದರ್ಜೆ ಗುಮಾಸ್ತ, ಆರೋಗ್ಯ ನಿರೀಕ್ಷಕ, ರೇಕಾರ್ಡ್ ಕೀಪರ್ ಇನ್ನು ಮುಂತಾದ ಇದೇ ದರ್ಜೆಯ ನೌಕರರನ್ನು ಮುಖ್ಯಾಧಿಕಾರಿಯಾಗಿ ನೇಮಕ ಮಾಡುವುದು ಸರಿಯಾದ ಕ್ರಮವೇ ;

(ಈ) ಹಾಗಿದ್ದಲ್ಲಿ, ಈ ಸಂಸ್ಥೆಗಳ ಮುಖ್ಯಾಧಿಕಾರಿಗಳ ಹುದ್ದೆಗೆ ಇಲಾಖೆಯಲ್ಲಿರುವ ಸಹಾಯಕ ನಿರ್ದೇಶಕರು, ಉಪ ತಹಶೀಲ್ದಾರ್, ಅಥವಾ ಇದೇ ವೃಂದದ ಬೇರೆ ಇಲಾಖೆಯವರನ್ನು ನೇಮಕ ಮಾಡಲು ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳುವುದೇ ?

## ಸ್ಥಳೀಯ ಸಂಸ್ಥೆಗಳಿಗೆ ೨೦೧೯-೨೦೨೦ನೇ ಸಾಲಿನಲ್ಲಿ ನೀಡಿರುವ ಅನುದಾನ ಕುರಿತು

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೩೧ (೧೮೦೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦೨೦ನೇ ಸಾಲಿನಲ್ಲಿ ರಾಜ್ಯದ ಸ್ಥಳೀಯ ಸಂಸ್ಥೆಗಳಿಗೆ ಎಸ್.ಎಫ್.ಸಿ. ಮತ್ತು ಇತರೆ ಎಲ್ಲಾ ಹಣಕಾಸು ಯೋಜನೆಗಳಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಈ ಅನುದಾನವನ್ನು ಸಂಪೂರ್ಣ ಬಳಕೆ ಮಾಡಿಕೊಂಡು ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ ಅಥವಾ ಇಲ್ಲವೇ ; ಅನುದಾನವನ್ನು ಪೂರ್ಣ ಬಳಕೆ ಮಾಡಿಕೊಳ್ಳದಿದ್ದಲ್ಲಿ , ಮಾರ್ಚ್ ೨೦೨೦ರ ಅಂತ್ಯಕ್ಕೆ ಎಷ್ಟು ಹಣ ಉಳಿಕೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳು ಸದರಿ ಹಣಕಾಸು ಯೋಜನೆಗಳಿಂದ ನೀಡಿರುವ ಮೊತ್ತವೆಷ್ಟು ; ಈ ಅನುದಾನವನ್ನು ಬಳಸಿಕೊಂಡು ಕೈಗೊಂಡಿರುವ ಕಾಮಗಾರಿಗಳ / ಮೂಲಭೂತ ಸೌಲಭ್ಯಗಳ ಮಾಹಿತಿಯನ್ನು ಜಿಲ್ಲೆಯ ಸಂಸ್ಥೆವಾರು ವಿವರ ಒದಗಿಸುವುದು ?

# ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗಾಗಿ ಕರೆಯಲಾದ ಟೆಂಡರ್ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೫೩೨ (೧೮೬೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೯–೨೦ನೇ ಸಾಲಿನಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ವಿವಿಧ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗಾಗಿ ಎಷ್ಟು ಮೊತ್ತದ ಟೆಂಡರ್ ಕರೆಯಲಾಗಿದೆ ; (ಕೈಗಾರಿಕಾ ಪ್ರದೇಶವಾರು ವಿವರ ನೀಡುವುದು)

(ಆ) ಸದರಿ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗಿಯಾದ ಬಿಡ್‌ದಾರರು, ಟೆಂಡರ್ ಪಡೆದ ಗುತ್ತಿಗೆದಾರರ ಪೂರ್ಣ ವಿವರಗಳನ್ನು ಒದಗಿಸುವುದು ;

(ಇ) ಟೆಂಡರ್ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸದೆ, ಅವ್ಯವಹಾರಗಳು ನಡೆದಿರುವ ಬಗ್ಗೆ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಟೆಂಡರ್ ಅರ್ಜಿ ಸಲ್ಲಿಕೆ ನಂತರ ಫೈನಾನ್ಷಿಯಲ್ ಬಿಡ್‌ನಲ್ಲಿ ಅನೇಕ ಲೋಪದೋಷಗಳಿದ್ದು, ನಿರ್ದಿಷ್ಟ ವ್ಯಕ್ತಿಗೆ ಅನುಕೂಲ ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ವಲಯವಾರು, ಅಧಿಕಾರಿವಾರು ಪೂರ್ಣ ವಿವರ ನೀಡುವುದು)

## ತೋಟಗಾರಿಕೆ ಫಾರಂಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೫೩೩ (೧೮೬೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಷ್ಟು ಸ್ಥಳಗಳಲ್ಲಿ ತೋಟಗಾರಿಕೆ ಫಾರಂಗಳಿವೆ ;

(ಆ) ಸದರಿ ಫಾರಂಗಳಲ್ಲಿ ಯಾವ ಯಾವ ವಿಧದ ಹಣ್ಣುಗಳನ್ನು ಬೆಳೆಯಲಾಗುತ್ತಿದೆ ;

(ಇ) ಸದರಿ ಫಾರಂಗಳಲ್ಲಿ ಆಧುನಿಕ ಬೇಸಾಯ ಪದ್ಧತಿ ಹಾಗೂ ಹೊಸ ತಳಿಗಳ ಸಂಶೋಧನೆಗೆ ಯಾವುದಾದರೂ ಯೋಜನೆಯನ್ನು ರೂಪಿಸಲಾಗಿದೆಯೇ ;

(ಈ) ಹಾಗಾದಲ್ಲಿ ಸದರಿ ಯೋಜನೆಯ ರೂಪುರೇಷೆಗಳು ಹಾಗೂ ಅಂದಾಜು ಮೊತ್ತವೆಷ್ಟು ? (ವಿವರ ನೀಡುವುದು)

## ಪೀಕಾರ್ಡ್ ಬ್ಯಾಂಕ್‌ಗಳಿದ ರೈತರು ಪಡೆದ ಸಾಲದ ಧಾಂ ದುಪ್ಪಟ್ಟು ಯೋಜನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೫೩೪ (೧೮೬೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೀಕಾರ್ಡ್ ಬ್ಯಾಂಕುಗಳಿಂದ ರೈತರು ಪಡೆದ ಸಾಲದ ಸಂಬಂಧ ಧಾಂ ದುಪ್ಪಟ್ಟು ಯೋಜನೆಯನ್ನು ಸರ್ಕಾರದಿಂದ ಜಾರಿಗೆ ತರಲಾಗಿದೆಯೇ ;

(ಆ) ಧಾಂ ದುಪ್ಪಟ್ಟು ಯೋಜನೆಯ ರೂಪು ರೇಷೆಗಳೇನು ; (ವಿವರ ನೀಡುವುದು)

(ಇ) ಸದರಿ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; ಈ ಸಂಬಂಧ ಸರ್ಕಾರ ಪೀಕಾರ್ಡ್ ಬ್ಯಾಂಕ್‌ಗಳಿಗೆ ಪಾವತಿಮಾಡಿರುವ ಒಟ್ಟು ಮೊತ್ತವೆಷ್ಟು ;

(ಈ) ಸದರಿ ಯೋಜನೆಯ ಫಲಾನುಭವಿಗಳಿಗೆ ಮುಂದುವರೆದ ಬಾಕಿ ಬಡ್ಡಿಯನ್ನು ಸರ್ಕಾರ ಇದುವರೆವಿಗೂ ಪಾವತಿಸದೆ ಇರಲು ಕಾರಣಗಳೇನು ಹಾಗೂ ಪಾವತಿಸಬೇಕಾದ ಒಟ್ಟು ಮೊತ್ತವೆಷ್ಟು ; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತವನ್ನು ಪಾವತಿಸಲಾಗುವುದು ?

## ನೀರಿನ ಟ್ಯಾಂಕರುಗಳಿಗೆ ಕಾನೂನು ಬಾಹಿರವಾಗಿ ಸ್ಟ್ಯಾಂಪಿಂಗ್ ಮಾಡುತ್ತಿರುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೫೩೫ (೯೧೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಹಾಗೂ ಇತರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪೆಸೋ ಮಾನ್ಯತೆ ಪಡೆಯದೆ (ಪೆಟ್ರೋಲಿಯಂ ಅಂಡ್ ಎಕ್ಸ್‌ಪ್ಲೋಸೀವ್ಸ್ ಸೇಫ್ಟಿ ಆರ್ಗನೈಸೇಷನ್) ಇರುವ ನೀರಿನ ಟ್ಯಾಂಕರುಗಳಿಗೆ ಡೀಸಲ್ ಮತ್ತು ಪೆಟ್ರೋಲ್ ಸರಬರಾಜು ಮಾಡುವಂತೆ ಕಾನೂನು ಮಾಪನಶಾಸ್ತ್ರ ಇಲಾಖೆಯ ಅಧಿಕಾರಿಗಳು ಕಾನೂನು ಬಾಹಿರವಾಗಿ ಸ್ಟೈಂಪಿಂಗ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೀರು ಸರಬರಾಜು ಮಾಡುವ ಟ್ಯಾಂಕರುಗಳಲ್ಲಿ ಡೀಸೆಲ್ ಮತ್ತು ಪೆಟ್ರೋಲ್‌ನ್ನು, ರಸ್ತೆ ಹಾಗೂ ಶಾಲಾ ಕಾಲೇಜುಗಳ ಅವರಣದಲ್ಲಿ ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಸಂಬಂದ ಇದುವರೆವಿಗೂ ಎಷ್ಟು ಅಪರಾಧಗಳನ್ನು ಪತ್ತೆ ಹಚ್ಚಲಾಗಿದೆ ;

(ಈ) ಅಪರಾಧಗಳ ಸಂಬಂಧ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಈ ರೀತಿ ನಿಯಮಬಾಹಿರವಾಗಿ ಸ್ವ್ಯಾಪಿಂಗ್ ಮಾಡಿರುವ ಎಷ್ಟು ಅಧಿಕಾರಿ/ನೌಕರರ ಮೇಲೆ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಊ) ನಿಯಮಬಾಹಿರ ಚಟುವಟಿಕೆಯನ್ನು ಕಟ್ಟುನಿಟ್ಟಾಗಿ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಗಣಿಗಾರಿಕೆಗೆ ಗುತ್ತಿಗೆ ನೀಡುತ್ತಿರುವ ಕುರಿತು

**ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೫೩೬ (೧೮೧೭) ಮಾನ್ಯ ಬೃಹತ್ ಮತ್ತು ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತ (ಎಂ.ಎಂ.ಎಲ್) ದಿಂದ ಇಲ್ಲಿಯವರೆಗೂ ರಾಜ್ಯದಲ್ಲಿ ಎಷ್ಟು ಜನರಿಗೆ ಮತ್ತು ಎಷ್ಟು ಸಂಸ್ಥೆಗಳಿಗೆ ಗಣಿಗಾರಿಕೆಗೆ ಗುತ್ತಿಗೆ (ಲೀಸ್)

ನೀಡಲಾಗಿದೆ ; ಯಾವ ಯಾವ ಖನಿಜಗಳನ್ನು ಹೊರ ತೆಗೆಯಲು ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ನಿಗಮದಿಂದ ಸುಣ್ಣಕಲ್ಲು (ಲೈಮ್‌ಸ್ಟೋನ್) ಮತ್ತು ಡೋಲೋಮೆಟ್ ಖನಿಜಗಳ ಗಣಿಗಾರಿಕೆಗಾಗಿ ರಾಜ್ಯದಲ್ಲಿ ಇಲ್ಲಿಯವರೆಗೂ ಒಟ್ಟು ಎಷ್ಟು ಜನರಿಗೆ/ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ ;

(ಇ) ನಿಗಮದಿಂದ ಲೀಸ್ ಪಡೆದ ಪ್ರತಿಯೊಬ್ಬರಿಗೆ ಅಥವಾ ಪ್ರತಿ ಸಂಸ್ಥೆಗೆ ನೀಡಲಾಗಿರುವ ಲೀಸ್‌ನ ಅವಧಿ ಎಷ್ಟು; ಯಾವ ದಿನಾಂಕದಿಂದ ಮತ್ತು ಎಷ್ಟು ಎಕರೆ ಪ್ರದೇಶದಲ್ಲಿ ಎಷ್ಟು ಘನ/ ವಿಸ್ತೀರ್ಣ ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ ;

(ಈ) ಲೀಸ್ ಪಡೆದ ಪ್ರತಿಯೊಬ್ಬರಿಗೂ ಇಲ್ಲಿಯವರೆಗೂ ಎಷ್ಟು ಪ್ರಮಾಣದ ಖನಿಜವನ್ನು ಹೊರ ತೆಗೆದಿರುತ್ತಾರೆ ;

(ಉ) ಕ.ರಾ.ಖ.ಅನಿ.ನಿಗೆ ಗಣಿಗಾರಿಕೆಯಿಂದ ಎಷ್ಟು ಆದಾಯ ಬಂದಿರುತ್ತದೆ ; ಕಳೆದ ೩ ವರ್ಷಗಳಿಂದ ಪ್ರತಿ ವರ್ಷವಾರು ಪ್ರತಿ ಖನಿಜವಾರು ಮಾಹಿತಿ ನೀಡುವುದು ;

(ಊ) ನಿಗಮದಿಂದ ಇಲ್ಲಿಯವರೆಗೂ ಎಷ್ಟು ಜನರಿಗೆ/ಸಂಸ್ಥೆಗಳಿಗೆ ಗುತ್ತಿಗೆಯನ್ನು ಬಿಟ್ಟು ಕೊಡಲಾಗಿದೆ ; ಮತ್ತು ಗುತ್ತಿಗೆಯನ್ನು ವರ್ಗಾಯಿಸಲಾಗಿದೆ ;

(ಋ) ರಾಜ್ಯದಲ್ಲಿ ಸ್ವಂತ ಗಣಿಗಾರಿಕೆಯನ್ನು ಹೊಂದಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪ್ರಸ್ತುತ ಎಷ್ಟು ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ ;

(ಎ) ಸದರಿ ಕಾರ್ಖಾನೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೫೩೭ (೧೮೪೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಉದ್ದಿಮೆಗಳಲ್ಲಿ ಲಾಭ ತರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಕಳೆದ ೧೦ ವರ್ಷಗಳಲ್ಲಿ ಸಾರ್ವಜನಿಕ ಉದ್ದಿಮೆಗಳಿಗಾಗಿ ರಾಜ್ಯ ಸರ್ಕಾರವು ನೀಡಿರುವ ಹಣವೆಷ್ಟು ;

(ಈ) ನಷ್ಟದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಬಂಡವಾಳ ಹಿಂತೆಗೆತವನ್ನು ಇದುವರೆವಿಗೂ ಮಾಡದೇ ಇರಲು ಕಾರಣವೇನು ?

## ಸಹಕಾರಿ ಸಂಘಗಳಲ್ಲಿ ಪ್ರತಿಯೊಬ್ಬ ರೈತರಿಗೂ ಸದಸ್ಯತ್ವದ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೫೩೮ (೧೮೫೦) ಮಾನ್ಯ ಸಹಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರಿ ಸಂಘಗಳಲ್ಲಿ ಪ್ರತಿಯೊಬ್ಬ ರೈತರಿಗೂ ಸದಸ್ಯತ್ವ ನೀಡಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಸದಸ್ಯತ್ವ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಈ ಸದಸ್ಯರಿಗೆ ಸರ್ಕಾರ ಮತ್ತು ಸಹಕಾರಿ ಸಂಘಗಳಿಂದ ದೊರೆಯುವ ಸವಲತ್ತುಗಳೇನು ?

## ಕೋಲಾರ ಜಿಲ್ಲೆ ನರಸಾಪುರ ಮತ್ತು ವೇಮಗಲ್ ಕೈಗಾರಿಕಾ ಪ್ರದೇಶದ ಕಾರ್ಖಾನೆ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೩೯ (೧೮೪೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲೆಯ ನರಸಾಪುರ ಹಾಗೂ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಹಾಲಿ ಚಾಲ್ತಿಯಲ್ಲಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು;

(ಆ) ಈ ಕಾರ್ಖಾನೆಗಳಿಗೆ ಸರ್ಕಾರ ನೀಡಿರುವ ಪ್ರೋತ್ಸಾಹದಾಯಕ ಸವಲತ್ತುಗಳು ಯಾವುವು ;

(ಇ) ಈ ಕಾರ್ಖಾನೆಗಳು ಹೂಡಿರುವ ಬಂಡವಾಳ ಎಷ್ಟು ; ಕಾರ್ಖಾನೆವಾರು ವಿವರಗಳನ್ನು ನೀಡುವುದು ;

(ಈ) ಈ ಕಾರ್ಖಾನೆಗಳಲ್ಲಿ ಕೆಲಸ ಮಾಡುತ್ತಿರುವ ನೌಕರ/ಕಾರ್ಮಿಕರ ಸಂಖ್ಯೆ ಎಷ್ಟು ; ಇದರಲ್ಲಿ ಕನ್ನಡಿಗರ ಸಂಖ್ಯೆ ಎಷ್ಟು ? (ಕಾರ್ಖಾನೆವಾರು ವಿವರಗಳನ್ನು ನೀಡುವುದು)

## ಮಾವಿನ ಹಣ್ಣು ಬೆಳೆ ವಿಸ್ತೀರ್ಣ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೪೦ (೧೮೪೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಾವಿನ ಹಣ್ಣು ಬೆಳೆ ವಿಸ್ತೀರ್ಣ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ರಾಜ್ಯದಲ್ಲಿ ಮಾವಿನ ಹಣ್ಣಿನ ಸಂಸ್ಕರಣ ಘಟಕಗಳ ಸಂಖ್ಯೆ ಎಷ್ಟು ; (ಇದರಲ್ಲಿ ಖಾಸಗಿ, ಸರ್ಕಾರಿ ಹಾಗೂ ಸಹಕಾರಿ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ರಾಮನಗರ ಜಿಲ್ಲೆಗಳಲ್ಲಿ ಸರ್ಕಾರದ ವತಿಯಿಂದ ಮಾವಿನಹಣ್ಣಿನ ಸಂಸ್ಕರಣ ಘಟಕ ತೆರೆಯಲಾಗುವುದೇ ?

## ರಾಜ್ಯದಲ್ಲಿ ಪಡಿತರ ಚೀಟಿಯ ವಿತರಣೆಯ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪೧ (೧೭೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೂರು ವರ್ಷಗಳಿಂದ ಪಡಿತರ ಚೀಟಿ ಪಡೆಯಲು ಸಲ್ಲಿಕೆಯಾದ ಒಟ್ಟು ಅರ್ಜಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಸಲ್ಲಿಕೆಯಾಗಿರುವ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳು ವಿಲೇವಾರಿಯಾಗಿವೆ ; ವಿಲೇವಾರಿಯಾಗದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಇದಕ್ಕೆ ಕಾರಣಗಳೇನು ;

(ಇ) ಬಾಕಿ ಉಳಿದಿರುವ ಪಡಿತರ ಚೀಟಿ ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈಗಾಗಲೇ ಪಡಿತರ ಚೀಟಿ ಪಡೆದಿರುವ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ಪಡಿತರ ಚೀಟಿ ಸಿಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಫಲಾನುಭವಿಗಳಿಗೆ ನಿಗದಿತ ಅವಧಿಯೊಳಗೆ ಪಡಿತರ ಸೌಲಭ್ಯ ಸಿಗುವಂತಾಗಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯಲ್ಲಿ ತೊಗರಿ ಬೆಳೆ ಖರೀದಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೫೪೨ (೧೮೨೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಎ.ಪಿ.ಎಂ.ಸಿ ವತಿಯಿಂದ ಎಷ್ಟು ತೊಗರಿ ಬೆಳೆಯನ್ನು ಖರೀದಿಸಲಾಗುತ್ತಿದೆ ;

(ಆ) ಹೆಚ್ಚಾಗಿ ತೊಗರಿ ಬೆಳೆದಿರುವ ರೈತರಿಂದ ಮಧ್ಯವರ್ತಿಗಳು ಕಡಿಮೆ ದರದಲ್ಲಿ ತೊಗರಿ ಖರೀದಿಸುತ್ತಿದ್ದು, ಇದರಿಂದಾಗಿ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ತೊಗರಿ ಖರೀದಿಯಲ್ಲಿ ನಿಗಧಿಪಡಿಸಿರುವ ಮಿತಿಯನ್ನು ಸರ್ಕಾರ ಹಿಂಪಡೆಯುವುದೇ ?

## ದಾಸೋಹ ಯೋಜನೆಯಡಿ ಪಡಿತರ ನೀಡುತ್ತಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೫೪೩ (೧೮೨೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದಾಸೋಹ ಯೋಜನೆ ಅಡಿಯಲ್ಲಿ ಎಷ್ಟು ಸಂಸ್ಥೆಗಳಿಗೆ ಪಡಿತರ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ದಾಸೋಹ ಯೋಜನೆ ಅನುಷ್ಠಾನಗೊಳಿಸಲು ಇರುವ ಮಾನದಂಡಗಳೇನು ;

(ಇ) ಇತ್ತೀಚೆಗೆ ಯಾವ ಸಂಸ್ಥೆ, ಮಠಗಳಿಗೆ ದಾಸೋಹ ಯೋಜನೆಯನ್ನು ಮೊಟಕುಗೊಳಿಸಲಾಗಿದೆ ? (ವಿವರ ನೀಡುವುದು)

## ಹಿಂದುಳಿದ ವರ್ಗಗಳಿಗೆ KIADB ಮತ್ತು KSSIDC ವತಿಯಿಂದ ನೀಡುವ ಪ್ಲಾಟ್‌ಗಳಿಗೆ ಸಬ್ಸಿಡಿ ನೀಡುವ ಕುರಿತು

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೪೪ (೧೭೯೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳಿಗೆ ಕೆ.ಐ.ಎ.ಡಿ.ಬಿ. ಮತ್ತು ಕೆ.ಎಸ್.ಎಸ್.ಐ.ಡಿ.ಸಿ ನಿಂದ ಹಂಚಿಕೆ ಮಾಡಲಾಗುವ ಪ್ಲಾಟ್‌ಗಳಿಗೆ ಸಬ್ಸಿಡಿ ನೀಡುವ ಕಾರ್ಯಕ್ರಮಕ್ಕೆ ಆದೇಶ ಹೊರಡಿಸಿರುವುದು ಯಾವಾಗ ;

(ಆ) ಹಿಂದುಳಿದ ವರ್ಗಗಳಿಗೆ ಶೇಕಡ ಎಷ್ಟು ಸಬ್ಸಿಡಿಯನ್ನು ಈ ಪ್ಲಾಟ್‌ಗಳಿಗೆ ನೀಡುವ ಅವಕಾಶವನ್ನು ಕಲ್ಪಿಸಲಾಗಿದೆ ;

(ಇ) ಸರ್ಕಾರ ಆದೇಶ ಹೊರಡಿಸಿದಾಗಿನಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಎಷ್ಟು ಹಿಂದುಳಿದ ವರ್ಗಗಳ ಫಲಾನುಭವಿಗಳು ಈ ಪ್ರಯೋಜನವನ್ನು ಪಡೆದಿರುತ್ತಾರೆ. ಮತ್ತು ಎಷ್ಟು ಹಣ ಸಬ್ಸಿಡಿಯಾಗಿ ನೀಡಲಾಗಿದೆ ? (ವರ್ಗವಾರು ಸಂಖ್ಯೆ ನೀಡುವುದು)

## ರಾಜ್ಯದಲ್ಲಿ ನಗರಸಭೆ/ಪುರಸಭೆ /ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಹುದ್ದೆಗಳಿಗೆ ಮೀಸಲಾತಿ ಪ್ರಕಟಿಸುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೪೫ (೧೮೧೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರಸಭೆ/ಪುರಸಭೆ/ಪಟ್ಟಣ ಪಂಚಾಯತಿಗಳಿಗೆ ಈಗಾಗಲೇ ಚುನಾವಣೆ ನಡೆದು ಸುಮಾರು ೪ ತಿಂಗಳು ಕಳೆದಿದ್ದರೂ ಸಹ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಹುದ್ದೆಗಳಿಗೆ ಮೀಸಲಾತಿ ಪ್ರಕಟಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಕಟಿಸದೇ ಇರುವುದಕ್ಕೆ ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಿಸಲಾತಿ ಪ್ರಕಟಿಸದೇ ಇರುವುದರಿಂದ ನಗರಸಭೆ/ಪುರಸಭೆ/ ಪಟ್ಟಣ ಪಂಚಾಯತಿಗಳಲ್ಲಿ ಚುನಾಯಿತರಾದ ಜನಪ್ರತಿನಿಧಿಗಳ ಹಕ್ಕನ್ನು ಮೊಟುಕುಗೊಳಿಸಿದಂತಾಗುವುದಿಲ್ಲವೇ ;

(ಇ) ಹಾಗಿದ್ದಲ್ಲಿ, ಅಧ್ಯಕ್ಷರು ಹಾಗೂ ಉಪಾಧಕ್ಷರುಗಳ ಹುದ್ದೆಗಳಿಗೆ ಮೀಸಲಾತಿಯನ್ನು ಎಷ್ಟು ದಿನಗಳಲ್ಲಿ ಪ್ರಕಟಿಸಲಾಗುವುದು ?

## ಸಹಕಾರಿ ಬ್ಯಾಂಕಿನಲ್ಲಿ ೩೭೧(ಜೆ) ಅನ್ನು ಅನುಷ್ಠಾನಗೊಳಿಸಿರುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೪೬ (೧೮೪೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಯಮಿತ ಕೇಂದ್ರ ಕಛೇರಿಯಲ್ಲಿ ಎಷ್ಟು ಅಧಿಕಾರಿ/ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಹುದ್ದೆ/ಹೆಸರುಗಳೊಂದಿಗೆ ಸಂಪೂರ್ಣ ವಿವರ ನೀಡುವುದು ;

(ಆ) ಸದರಿ ಬ್ಯಾಂಕಿನಲ್ಲಿ ಹೈದರಾಬಾದ್-ಕರ್ನಾಟಕ ಭಾಗಕ್ಕೆ ಸಂವಿಧಾನದ ಅನುಚ್ಛೇದ 371(ಜೆ) ರನ್ವಯ ನೇಮಕಾತಿಯಲ್ಲಿ ಮೀಸಲಾತಿಯನ್ನು ನಿಗಧಿಪಡಿಸಲಾಗಿದೆಯೇ ; ಇದ್ದಲ್ಲಿ, ಸ್ಪಷ್ಟ ಮಾಹಿತಿ ನೀಡುವುದು ;

(ಇ) ಸದರಿ ಕೇಂದ್ರ ಕಛೇರಿ ಮತ್ತು ಶಾಖಾ ಬ್ಯಾಂಕುಗಳಲ್ಲಿ ಸಂವಿಧಾನದ ಅನುಚ್ಛೇದ 371(ಜೆ) ರನ್ವಯ ಪದೋನ್ನತಿ ಪಡೆದಿರುವ ಅಧಿಕಾರಿ/ನೌಕರರ ಹೆಸರು ಮತ್ತು ಹುದ್ದೆವಾರು ಮಾಹಿತಿ ನೀಡುವುದು ;

(ಈ) ಸಂವಿಧಾನದ ಅನುಚ್ಛೇದ ೩೭೧(ಜೆ) ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಸರ್ಕಾರವು ಉಪ ಸಮಿತಿಯನ್ನು ರಚಿಸಿದೆಯೇ; ಇದ್ದಲ್ಲಿ, ಕರ್ನಾಟಕ ರಾಜ್ಯ ಸರ್ಕಾರಿ ಅಪೆಕ್ಸ್ ಬ್ಯಾಂಕ್‌ನಲ್ಲಿ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಮೂಲ ಸೌಕರ್ಯ ಕಲ್ಪಿಸುವುದು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂಧ ಚುನಾಯಿತರಾದವರು) :-**

೧೫೪೭ (೧೮೩೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ನಗರದ ಹೊರ ವರ್ತುಲ ರಸ್ತೆ ಸುತ್ತಮುತ್ತ ಇರುವ ಬಡಾವಣೆಗಳಲ್ಲಿ ಮೂಲ ಸೌಕರ್ಯಗಳಿಲ್ಲದೆ ಹಾಗೂ ಕಸ ವಿಲೇವಾರಿ ಮಾಡದಿರುವುದರಿಂದ ಅಲ್ಲಿನ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೂಲಸೌಕರ್ಯ ಕಲ್ಪಿಸಲು ಕಸ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಮೂಲ ಸೌಕರ್ಯ ಕಲ್ಪಿಸಲು ಸರ್ಕಾರವು ವಿಶೇಷ ಅನುದಾನವನ್ನೇನಾದರೂ ಒದಗಿಸಿದೆಯೇ ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ಒದಗಿಸಿ ಮೂಲ ಸೌಕರ್ಯಗಳನ್ನು ಯಾವ ಕಾಲಮಿತಿಯೊಳಗಾಗಿ ಕಲ್ಪಿಸಲಾಗುವುದು ?

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಶೌಚಾಲಯ ನಿರ್ಮಿಸುತ್ತಿರುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂಧ ಚುನಾಯಿತರಾದವರು) :–**

೧೫೪೮ (೧೮೩೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಬೀದರ್ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆರೋಗ್ಯ ಇಲಾಖೆಯ ವಿಭಾಗದಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆ ಅಡಿಯಲ್ಲಿ ಬಡವರಿಗಾಗಿ ಪ್ರತ್ಯೇಕವಾಗಿ ಶೌಚಾಲಯ ನಿರ್ಮಾಣ ಮಾಡಿಕೊಳ್ಳಲು ಒಟ್ಟು ಬಂದ ಅರ್ಜಿಗಳೆಷ್ಟು ; ಅದರಲ್ಲಿ ಆಯ್ಕೆಯಾದ/ತಿರಸ್ಕೃತಗೊಂಡ ಫಲಾನುಭವಿಗಳೆಷ್ಟು ; (ಆಯ್ಕೆಯಾದ ಫಲಾನುಭವಿಗಳ ಹೆಸರು ಸಹಿತ ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಆ) ಶೌಚಾಲಯ ನಿರ್ಮಾಣಕ್ಕೆ ತಗುಲಿದ ವೆಚ್ಚ ಎಷ್ಟು ; (ವರ್ಗವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳ ಶೌಚಾಲಯಗಳನ್ನು ಸ್ವತಃ ಫಲಾನುಭವಿಗಳೇ ಕಟ್ಟಿಸಿಕೊಳ್ಳುತ್ತಿದ್ದಾರೆಯೇ ; ಅಥವಾ ಗುತ್ತಿಗೆದಾರರ ಮುಖಾಂತರ ಕಟ್ಟಿಸಿ ಕೊಡಲಾಗುತ್ತಿದೆಯೇ ; ಪ್ರತಿ ಶೌಚಾಲಯಕ್ಕೆ ತಗುಲಿದ ಮೊತ್ತದೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು ?

## ಆಭರಣಗಳನ್ನು ಖರೀದಿಸುವಾಗ ಗ್ರಾಹಕರುಗಳು ವಂಚಿತರಾಗುತ್ತಿರುವುದನ್ನು ತಡೆಗಟ್ಟುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೪೯ (೧೮೪೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಂಗಾರ, ರತ್ನ ಬೆಳ್ಳಿ ಹಾಗೂ ಇನ್ನಿತರೆ ಬೆಲೆ ಬಾಳುವ ಆಭರಣಗಳ ಗುಣಮಟ್ಟವನ್ನು ಪರೀಕ್ಷಿಸಲು ಸರ್ಕಾರದ ಮಾನದಂಡಗಳೇನು; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಗ್ರಾಹಕರುಗಳು ಇತ್ತೀಚಿನ ದಿನಗಳಲ್ಲಿ ಆಭರಣ ಮಳಿಗೆಗಳಿಂದ ಖರೀದಿಸಿದಾಗ ವಂಚನೆಗಳಿಗೆ ಒಳಪಡುತ್ತಿರುವ ಸಂಖ್ಯೆಯು ಹೆಚ್ಚುತ್ತಿರುವುದರಿಂದ ಇಂತಹ ವಂಚನೆಗಳನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ವಂಚನೆಗಳಿಗೆ ಒಳಗಾಗಿರುವ ಪ್ರಕರಣಗಳ ದಾಖಲಾತಿ ಸಂಖ್ಯೆ ಎಷ್ಟು; ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ, ಇಲ್ಲಿಯವರೆಗೆ ಎಷ್ಟು ಮಳಿಗೆಗಳ ಮೇಲೆ ಸರ್ಕಾರವು ಕಾನೂನು ಕ್ರಮ ಕೈಗೊಂಡಿದೆ? (ಸಂಪೂರ್ಣ ವಿವರ ನೀಡುವುದು)

## ತುಮಕೂರು ಹಾಲು ಒಕ್ಕೂಟ ಬೆಂಗಳೂರು ಮಾರುಕಟ್ಟೆಯಲ್ಲಿ ನಂದಿನಿ ಮಳಿಗೆಗಳ ಸ್ಥಾಪನೆ

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫೦ (೧೮೧೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಹಾಲು ಉತ್ಪಾದಕರ ಒಕ್ಕೂಟ ಬೆಂಗಳೂರು ವ್ಯಾಪ್ತಿಯಲ್ಲಿ ನಂದಿನಿ ಮಳಿಗೆ ಮತ್ತು ಹಾಲು ಮಾರಾಟ ಮಾಡಲು ಅನುಮತಿ ನೀಡಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಿಪಡಿಸಲು ಯಾವ ಕ್ರಮ ಕೈಗೊಂಡಿದೆ;

(ಆ) ನಂದಿನಿ ಮಳಿಗೆ ಪ್ರಾರಂಭ ಮಾಡಲು ಇರುವ ಆರಂಭಿಕ ಠೇವಣಿಯನ್ನು ಕೆನರಾ ಬ್ಯಾಂಕ್‌ನಲ್ಲಿಯೇ ಇಡಬೇಕು ಎಂಬ ನಿಯಮವನ್ನು ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕಳೆದ ೩ ವರ್ಷಗಳಲ್ಲಿ ತುಮಕೂರು ಹಾಲು ಒಕ್ಕೂಟದಿಂದ ಎಷ್ಟು ನಂದಿನಿ ಮಳಿಗೆಗಳನ್ನು ಪ್ರಾರಂಭಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನಂದಿನಿ ಹಾಲು ಮಾರಾಟ ಕೇಂದ್ರಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು;

(ಉ) ನಂದಿನಿ ಮಳಿಗೆಯನ್ನು ಸ್ಥಾಪಿಸಲು ನಿರುದ್ಯೋಗ ಯುವಕರಿಗೆ ಸರ್ಕಾರದಿಂದ ಸಹಾಯ ಧನ ಏನಾದರೂ ದೊರಕುತ್ತಿದೆಯೇ?

## ಪೊಲೀಸ್ ಹೌಸಿಂಗ್ ಸೊಸೈಟಿಯ ಅವ್ಯವಹಾರ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೫೧ (೧೭೮೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪೊಲೀಸ್ ಹೌಸಿಂಗ್ ಸೊಸೈಟಿಯಿಂದ ಎಲ್ಲಾ ವೃಂದದ ಪೊಲೀಸ್ ಸಿಬ್ಬಂದಿಗಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದುವರೆಗೆ ಎಲ್ಲಾ ವೃಂದದ ಪೊಲೀಸ್ ಸಿಬ್ಬಂದಿಗಳಿಂದ ಸ್ವೀಕರಿಸಿರುವ ಒಟ್ಟು ಮೊತ್ತವೆಷ್ಟು; ಸಿಬ್ಬಂದಿವಾರು ಸ್ವೀಕರಿಸಿರುವ ಮೊತ್ತದ ಸಂಪೂರ್ಣ ವಿವರ ನೀಡುವುದು;

(ಆ) ಸದರಿ ಸೊಸೈಟಿಯ ಕಾರ್ಯವ್ಯಾಪ್ತಿ ಮತ್ತು ರೂಪುರೇಷೆಗಳು ಹಾಗೂ ಸೊಸೈಟಿಯ ಗುರಿ ಮತ್ತು ಉದ್ದೇಶಗಳು ಏನು; ಬೈಲಾ ಪ್ರತಿಯೊಂದಿಗೆ ಪೂರ್ಣ ವಿವರ ನೀಡುವುದು ;

(ಇ) ಪೊಲೀಸ್ ಸಿಬ್ಬಂದಿಗಳಿಗೆ ನಿವೇಶನಗಳನ್ನು ನೀಡಲು ಖಾಸಗಿ ವ್ಯಕ್ತಿ ಮತ್ತು ಸಂಸ್ಥೆಗಳಿಂದ ಜಮೀನು ಖರೀದಿ ಮಾಡಲು ಕಳೆದ ಐದು ವರ್ಷಗಳಿಂದ ಈವರೆಗೆ ಸದರಿ ಸೊಸೈಟಿಯಿಂದ ಮುಂಗಡ ಮತ್ತು ಪೂರ್ತಿ ಪ್ರಮಾಣದಲ್ಲಿ ಎಷ್ಟು ಹಣ ಪಾವತಿಸಲಾಗಿದೆ; (ಪೂರ್ಣ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಖಾಸಗಿ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ಪಾವತಿಸಿರುವ ಹಣದ ಕರಾರು ಪ್ರತಿಗಳೊಂದಿಗೆ ದಿನಾಂಕವಾರು ಹಣದ ವರ್ಗಾವಣೆಯ ಸಂಪೂರ್ಣ ವಿವರಗಳನ್ನು ನೀಡುವುದು;

(ಉ) ಖಾಸಗಿ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ಮುಂಗಡ ಮತ್ತು ಪೂರ್ತಿ ಪ್ರಮಾಣದ ಹಣ ನೀಡಿ ಇದುವರೆಗೆ ಎಷ್ಟು ಜಮೀನು ಖರೀದಿ ಮಾಡಲಾಗಿದೆ; ಎಷ್ಟು ನಿವೇಶನ ಹಂಚಿಕೆ ಮಾಡಲಾಗಿದೆ ವಿವರ ನೀಡುವುದು; ಹಂಚಿಕೆಯಾಗದಿದ್ದಲ್ಲಿ ಕಾರಣಗಳೇನು; ಹಾಗಿದ್ದಲ್ಲಿ, ಪೊಲೀಸ್ ಸಿಬ್ಬಂದಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸುವ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು)

## ಮೆ: ಯಶಸ್ವಿನಿ ಅನಿಲ ಗೋದಾಮನ್ನು ಸ್ಥಳಾಂತರಿಸುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–**

೧೫೫೨ (೧೮೨೩) ಮಾನ್ಯ ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಪರಿಮಳನಗರದ (ವಾರ್ಡ್ ನಂ.೪೩) ೯ನೇ ಮುಖ್ಯರಸ್ತೆಯಲ್ಲಿರುವ ಮೆ:ಯಶಸ್ವಿನಿ ಗ್ಯಾಸ್ ಗೋದಾಮಿನಿಂದ ಸುತ್ತಮುತ್ತಲಿನ ನಾಗರಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಗ್ಯಾಸ್ ಗೋದಾಮನ್ನು ಸ್ಥಳಾಂತರಿಸುವ ಬಗ್ಗೆ ಸುತ್ತಮುತ್ತಲಿನ ನಾಗರಿಕರು ಸರ್ಕಾರಕ್ಕೆ ದೂರು ನೀಡಿದ್ದಾರೆಯೇ;

(ಇ) ಪಶ್ಚಿಮ ವಲಯದ ಉಪನಿರ್ದೇಶಕರು ದಿನಾಂಕ: ೨೩/೦೩/೨೦೧೭ ರಂದು ಗೋದಾಮನ್ನು ಕೂಡಲೇ ಬೇರೆ ಕಡೆ ವರ್ಗಾಯಿಸುವುದು ಸೂಕ್ತವೆಂದು ವರದಿ ನೀಡಿರುವುದು ನಿಜವೇ; ಯಾವ ದಿನಾಂಕದಂದು ವರದಿ ನೀಡಿದ್ದಾರೆ; ವರದಿಯ ಪ್ರತಿ ನೀಡುವುದು;

(ಈ) ಸದರಿ ಗೋದಾಮನ್ನು ತಕ್ಷಣವೇ ಸ್ಥಳಾಂತರಿಸಬೇಕೆಂದು ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ತಹಶೀಲ್ದಾರ್‌ರಿಗೆ ಪತ್ರ ಬರೆದಿರುವುದು ನಿಜವೇ; ಇದ್ದಲ್ಲಿ, ಯಾವ ದಿನಾಂಕದಂದು ಪತ್ರ ಬರೆದಿದ್ದಾರೆ; (ಪತ್ರದ ಪ್ರತಿ ನೀಡುವುದು)

(ಉ) ಜನನಿಬಿಡ ಪ್ರದೇಶದಲ್ಲಿ ಗ್ಯಾಸ್ ಅವಘಡ ತಪ್ಪಿಸುವ ದಿಸೆಯಲ್ಲಿ ಗೋದಾಮು ಸ್ಥಳಾಂತರಿಸಲು ಈವರೆಗೂ ಕೈಗೊಂಡಿರುವ ಕ್ರಮಗಳೇನು; ಯಾವ ನಿಗದಿತ ದಿನಾಂಕದೊಳಗೆ ಸ್ಥಳಾಂತರಿಸಿ ನಾಗರಿಕರನ್ನು ಅವಘಡದಿಂದ ರಕ್ಷಿಸಲಾಗುವುದು?

## ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಗಮದಿಂದ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ವಿವರ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–**

೧೫೫೩ (೧೮೧೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಯಮಿತ ಕೇಂದ್ರ ಕಛೇರಿ, ಇಲ್ಲಿ ಎಷ್ಟು ಅಧಿಕಾರಿ/ನೌಕರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ; (ಹೆಸರು ಮತ್ತು ಹುದ್ದೆವಾರು ವಿವರ ನೀಡುವುದು)

(ಆ) ಸದರಿ ಬ್ಯಾಂಕ್‌ನಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗಕ್ಕೆ ಸಂವಿಧಾನದ ಅನುಚ್ಛೇದ ೩೭೧(ಜೆ) ರನ್ವಂಯು ನೇವುಕಾತಿಯುಲ್ಲಿ ಮೀಸಲಾತಿಯನ್ನು ನಿಗಧಿಪಡಿಸಲಾಗಿದೆಯೇ; (೩೭೧(ಜೆ) ರನ್ವಯ ಪದೋನ್ನತಿ ಪಡೆದವರ ವಿವರಗಳನ್ನು ಹೆಸರು ಮತ್ತು ಹುದ್ದೆವಾರು ನೀಡುವುದು)

(ಇ) ಇಲ್ಲದಿದ್ದಲ್ಲಿ, ನಿಗಧಿಪಡಿಸದಿರಲು ಕಾರಣಗಳೇನು; ಮತ್ತು ಇದರಿಂದ ಅನುಚ್ಛೇದ ೩೭೧ (ಜೆ) ಉಲ್ಲಂಘಿಸಿದಂತಾಗುವುದಿಲ್ಲವೇ ಹಾಗೂ ನೌಕರರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೆ? (ವಿವರ ನೀಡುವುದು)

## ಬಿ.ಡಿ.ಎ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಆಡಳಿತಾಧಿಕಾರಿ ನೇಮಿಸುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–**

೧೫೫೪ (೧೮೨೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂಪ್ಲಾಯೀಸ್ ವೆಲ್ಫೇರ್ ಅಸೋಸಿಯೇಷನ್‌ನಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ಒಟ್ಟು ಎಷ್ಟು ತನಿಖೆಗಳು ನಡೆದಿವೆ; ಯಾರ್‍ಯಾರು ತನಿಖೆ ನಡೆಸಿದ್ದಾರೆ ; (ವಿವರ ನೀಡುವುದು)

(ಆ) ಸಂಘಗಳ ನೋಂದಣಿ ಕಾಯ್ದೆ ೧೯೬೦ ಕಂದಾಯ ಇಲಾಖೆಯ ಅಧೀನದಲ್ಲಿದ್ದ ಕಂದಾಯ ಇಲಾಖೆ ಅಧಿಕಾರಿಗಳು ಸಂಘದ ಅಧ್ಯಕ್ಷರೊಡನೆ ಶಾಮೀಲಾಗಿ ಪ್ರಾಧಿಕಾರದಲ್ಲಿನ ಸಂಘದ ವಿರುದ್ಧ ತನಿಖೆ ನಡೆಸಲು ಪ್ರಾಧಿಕಾರದಲ್ಲಿಯೇ ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅಧಿಕಾರಿಯನ್ನು ನೇಮಿಸಿರುವುದು ನಿಜವೇ; ಇದ್ದಲ್ಲಿ, ಅಲ್ಲಿನ ಅಧಿಕಾರಿಯನ್ನೇ ತನಿಖೆಗೆ ನೇಮಿಸಿರುವುದು ಕಾನೂನು ನಿಯಮಗಳಿಗೆ ವಿರುದ್ಧವಲ್ಲವೇ;

(ಇ) ನಿವೃತ್ತ ನ್ಯಾಯಾಧೀಶರವರು ಸಂಘದ ಅವ್ಯವಹಾರಗಳ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸಿರುವುದು ನಿಜವೇ; ಇದ್ದಲ್ಲಿ, ತನಿಖಾ ವರದಿಯ ಪ್ರತಿ ನೀಡುವುದು ;

(ಈ) ಸದರಿ ಸಂಘವು ಸಂಘಗಳ ನೋಂದಣಿ ಅಧಿನಿಯಮ ೧೯೬೦ರಡಿ ನೋಂದಾಯಿಸಿದ್ದರೂ, ಸಂಘ ನೋಂದಾಯಿಸಿರುವ ನಿವೇಶನಗಳ ಕ್ರಯ ಪತ್ರಗಳಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಸಂಘದ ಕಾಯ್ದೆ ೧೯೫೯ರಡಿ ನೋಂದಾಯಿಸಿರುವ ಸಂಘ ಎಂದು ಸುಳ್ಳು ಮಾಹಿತಿ ದಾಖಲಿಸಿರುವುದು ನಿಜವೇ; ಇದ್ದಲ್ಲಿ, ಸಂಘದ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಸಂಘಕ್ಕೆ ಆಡಳಿತಾಧಿಕಾರಿ ನೇಮಿಸದಿರಲು ಶಿಫಾರಸ್ಸು ಮಾಡಿರುವುದು ನಿಜವೇ; ಇದ್ದಲ್ಲಿ, ಇಲ್ಲಿಯವರೆಗೂ ನೇಮಿಸದಿರಲು ಕಾರಣಗಳೇನು; ಯಾವ ನಿರ್ಧಿಷ್ಟ ದಿನಾಂಕದಿಂದ ಆಡಳಿತಾಧಿಕಾರಿಯನ್ನು ನೇಮಿಸಿ ನಿವೇಶನಕ್ಕೆ ಹಣ ಪಾವತಿಸಿರುವ ಪ್ರಾಧಿಕಾರದ ನಿವೃತ್ತ ನೌಕರರಿಗೆ ನಿವೇಶನ ಹಂಚಿಕೆ ಮಾಡಿ ನ್ಯಾಯ ಒದಗಿಸಲಾಗುವುದು?

## ಮಡಿಕೇರಿ ನಗರ ಸಭೆಯಲ್ಲಿ ಸಿಬ್ಬಂದಿಗಳ ಕೊರತೆ ಕುರಿತು

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೫೫ (೧೮೦೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲಾ ಕೇಂದ್ರ ಮಡಿಕೇರಿ ನಗರ ಸಭೆಯಲ್ಲಿ ಸರ್ಕಾರದಿಂದ ಮಂಜೂರಾದ ಹುದ್ದೆಗಳು ಎಷ್ಟು; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಆ) ನಗರ ಸಭೆಯಲ್ಲಿ ಸಿಬ್ಬಂದಿಗಳ ಕೊರತೆಯಿಂದ ತೆರಿಗೆ ಕಟ್ಟಿಸಿಕೊಳ್ಳಲು ಹಾಗೂ ನಗರ ಸಭೆಯ ಕೆಲಸ ಕಾರ್ಯಗಳನ್ನು ಮಾಡಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? (ವಿವರ ನೀಡುವುದು)

## ಸಾರ್ವಜನಿಕ ಉದ್ಯಮಗಳು Corporate Social Responsibility ಅಡಿಯಲ್ಲಿ ವಿವಿಧ ಉದ್ದೇಶಗಳಿಗೆ ನೀಡಿರುವ ಅನುದಾನ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೫೫೬ (೧೮೩೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಸಾರ್ವಜನಿಕ ಉದ್ಯಮಗಳು Corporate Social Responsibility ಅಡಿ ವಿವಿಧ ಸಂಸ್ಥೆಗಳಿಗೆ ವಿವಿಧ ಉದ್ದೇಶಕ್ಕಾಗಿ ನೀಡಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾರ್ಯಕ್ರಮದ ಅಡಿ ನೀಡಲಾಗಿರುವ 'CSR' ಅನುದಾನವನ್ನು ಸಂಬಂಧಿಸಿದ ಸಂಸ್ಥೆಗಳು ಸದ್ಬಳಕೆ ಮಾಡಿರುವರೇ ಎಂದು ಖಾತರಿಪಡಿಸಿಕೊಳ್ಳಲು ಸರ್ಕಾರ ನಿಗಧಿ ಮಾಡಿರುವ ವ್ಯವಸ್ಥೆ ಯಾವುದು; (ವಿವರ ನೀಡುವುದು)

(ಇ) ಈ ಸಂಬಂಧ ನೀಡಿರುವ ಅನುದಾನದ ಬಳಕೆ ಬಗ್ಗೆ ಆಡಿಟ್ ಕೈಗೊಳ್ಳಲು ರಾಜ್ಯ ಅಥವಾ ಕೇಂದ್ರ ಸರ್ಕಾರ ನಿಯಮಗಳನ್ನು ರೂಪಿಸಿದೆಯೇ? (ವಿವರ ನೀಡುವುದು)

## ರೇಷ್ಮೆ ಉತ್ಪನ್ನವಾಗುವ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೫೫೭ (೧೮೩೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿವರ್ಷ ಉತ್ಪಾದನೆಯಾಗುತ್ತಿರುವ ರೇಷ್ಮೆ ಪ್ರಮಾಣ ಎಷ್ಟು; ಕಳೆದ ಮೂರು ವರ್ಷಗಳ ವಿವರಗಳನ್ನು ತಾಲ್ಲೂಕುವಾರು ವಿವರ ನೀಡುವುದು ;

(ಆ) ರಾಜ್ಯ ಸರ್ಕಾರವು ನಿಗಧಿಪಡಿಸಿಕೊಂಡಿರುವಷ್ಟು ರೇಷ್ಮೆ ಉತ್ಪಾದನೆಯನ್ನು ಪ್ರತಿ ವರ್ಷ ಸಾಧಿಸಲಾಗುತ್ತಿದೆಯೇ; (ಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಉತ್ಪಾದನೆಯಾಗುವ ರೇಷ್ಮೆಯಲ್ಲಿ ಎಷ್ಟು ಟನ್ ರೇಷ್ಮೆ ಹೊರ ದೇಶಗಳಿಗೆ ರಫ್ತಾಗುತ್ತದೆ; ಇದರಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು;

(ಈ) ರಾಜ್ಯದಲ್ಲಿ ರೇಷ್ಮೆ ಬೆಳೆ ಅಭಿವೃದ್ಧಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಯಡಿ ರೂಪಿಸಿರುವ ಯೋಜನೆಗಳೇನು; ಇದರಿಂದ ಕಳೆದ ಮೂರು ವರ್ಷಗಳಲ್ಲಿ ರೇಷ್ಮೆ ಬೆಳೆಗಾರರಿಗೆ ನೀಡಿರುವ ಸೌಲಭ್ಯಗಳು ಯಾವುವು? (ಪೂರ್ಣ ವಿವರ ನೀಡುವುದು)

## ಮಾಲ್ ಮತ್ತು ಕಂಪನಿಗಳ ರೀಟೆಲ್ ಔಟ್‌ಲೇಟ್‌ಗಳಲ್ಲಿ ಮಾರಾಟ ಮಾಡುತ್ತಿರುವ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೫೫೮ (೧೮೩೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮಾಲ್ ಮತ್ತು ಕಂಪನಿಗಳ ರೀಟೆಲ್ ಔಟ್‌ಲೆಟ್‌ಗಳಲ್ಲಿ ಮಾರಾಟ ಮಾಡುತ್ತಿರುವ ಆಹಾರ ಪದಾರ್ಥಗಳ ತನಿಖೆ ನಡೆಸುವ ಕ್ರಮ ಕುರಿತು ಸರ್ಕಾರ ಮಾರ್ಗದರ್ಶನ ನೀಡಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು ;

(ಆ) ಇಂತಹ ಮಾಲ್ ಮತ್ತು ಕಂಪನಿಗಳ ರೀಟೆಲ್ ಔಟ್‌ಲೆಟ್‌ಗಳಲ್ಲಿ ಮಾರಾಟವಾಗುತ್ತಿರುವ ತರಕಾರಿ ಹಣ್ಣು, ಹಂಪಲು ಇತ್ಯಾದಿ ಬಹುಬೇಗ ಹಾಳಾಗುವ ಪದಾರ್ಥಗಳ ಗುಣಮಟ್ಟವನ್ನು ಪರೀಕ್ಷಿಸಲು ಸರ್ಕಾರ ಯಾವುದಾದರು ವ್ಯವಸ್ಥೆ ರೂಪಿಸಿದೆಯೇ; (ವಿವರ ನೀಡುವುದು)

(ಇ) ಈ ಉಭಯ ಅಂಶಗಳ ಮೇಲೆ ಕೇಂದ್ರ ಸರ್ಕಾರ ಮಾರ್ಗದರ್ಶನ/ ನಿರ್ದೇಶನ ಹೊರಡಿಸಿದೆಯೇ? (ವಿವರ ನೀಡುವುದು)

## ರಾಜ್ಯದಲ್ಲಿ ನ್ಯಾಯಬೆಲೆ ಅಂಗಡಿಗಳಲ್ಲಿ ಮಿಲ್ಲೆಟ್, ಜೋಳ, ರಾಗಿ ಮತ್ತು ಇತರೆ ಪೌಷ್ಠಿಕ ಆಹಾರ ಪೂರೈಸುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)**

೧೫೮೯ (೧೯೧೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾರತದ ಪ್ರಧಾನ ಮಂತ್ರಿಗಳ ಕನಸಿನ ಯೋಜನೆಯಾದ 'ಮಿಲ್ಲೆಟ್ ಕ್ರಾಂತಿ' ಯೋಜನೆಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪೌಷ್ಠಿಕ ಆಹಾರಗಳಾದ ಮಿಲ್ಲೆಟ್, ಜೋಳ, ರಾಗಿ ಮುಂತಾದವುಗಳನ್ನು ನ್ಯಾಯ ಬೆಲೆ ಅಂಗಡಿಗಳ ಮುಖೇನ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ಸಾರ್ವಜನಿಕ ಪಡಿತರ ಮೂಲಕ ವಿತರಿಸಲು ಅಗತ್ಯವಿರುವಷ್ಟು ಮಿಲ್ಲೆಟ್, ರಾಗಿ, ಜೋಳ ರಾಜ್ಯದಲ್ಲಿ ಲಭ್ಯವಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ನಗರಾಭಿವೃದ್ಧಿ ಇಲಾಖೆ ಅಡಿ ಅನುಷ್ಠಾನಗೊಳಿಸುತ್ತಿರುವ ಕೇಂದ್ರ ಸರ್ಕಾರದ ಯೋಜನೆಗಳನ್ನು ಒಗ್ಗೂಡಿಸುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೫೬೦ (೧೮೫೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಯೋಜನೆಗಳಾದ UIDSMT (JNNURM), AMRUT, NKUSIP, Smart City Mission ಮುಂತಾದ ಹಲವು ಯೋಜನೆಗಳ ಅಡಿ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಹೊಸ ಯೋಜನೆಗಳು ಅನುಷ್ಠಾನಗೊಳಿಸಲಾಗುತ್ತಿವೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಯೋಜನೆಗಳ ಅಡಿಯಲ್ಲಿ ಇದುವರೆಗೂ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳು ಯಾವುವು; ಬಿಡುಗಡೆಯಾದ ಅನುದಾನ ಮತ್ತು ಖರ್ಚು ಮಾಡಿದ ಅನುದಾನದ ಸಂಪೂರ್ಣ ಮಾಹಿತಿ ನೀಡುವುದು;

(ಇ) ಈ ಮೇಲ್ಕಂಡ ಯೋಜನೆಗಳಲ್ಲಿ ಆಯ್ಕೆ ಆಗಿರುವ ಕೆಲವು ಪಟ್ಟಣಗಳು ಮತ್ತು ನಗರಗಳು Overlap ಆಗುತ್ತಿಲ್ಲವೇ; ಹಾಗಿದ್ದಲ್ಲಿ, ಈ ರೀತಿ Overlap ಆಗಲು ಕಾರಣವೇನು; ಮತ್ತು ಯಾವ ಮಾನದಂಡದ ಮೇಲೆ ಈ ಪಟ್ಟಣಗಳು/ ನಗರಗಳನ್ನು ಆಯ್ಕೆ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಧ್ಯೇಯ, ಉದ್ದೇಶ ಮತ್ತು ಅಂತಿಮ ಫಲಿತಾಂಶ ಹೊಂದಿರುವ ಈ ಬಗೆಯ ಯೋಜನೆಗಳನ್ನು ಒಗ್ಗೂಡಿಸಿ ಫಲಪ್ರದವಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ಯತ್ನಿಸಿದೆಯೇ: ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## Waste to Energy ತಂತ್ರಜ್ಞಾನ ಬಳಸಿ ವಿದ್ಯುತ್ ಉತ್ಪಾದನೆ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೧ (೧೭೮೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯ ತ್ಯಾಜ್ಯ ಸಂಸ್ಕರಣಾ ಘಟಕದ ತ್ಯಾಜ್ಯವನ್ನು ಉಪಯೋಗಿಸಿಕೊಂಡು Waste to Energy ತಂತ್ರಜ್ಞಾನ ಬಳಸಿ ವಿದ್ಯುತ್ ಉತ್ಪಾದನೆ ಮಾಡಲು Public-Private Partnership ಮಾಡೆಲ್ ನಡಿ ಖಾಸಗಿ ಕಂಪನಿಗಳು ಮುಂದೆ ಬಂದರೆ ಸರ್ಕಾರ ಅವಕಾಶ ಮಾಡಿಕೊಡುವುದೇ ; (ಸಂಪೂರ್ಣ ವಿವರ ನೀಡುವುದು)

(ಆ) ಅವಕಾಶವಿದ್ದಲ್ಲಿ, ಈ ಸಂಬಂಧ ರೂಪಿಸಿರುವ ನೀತಿ, ನಿಯಮಗಳು ಹಾಗೂ ಮಾನದಂಡಗಳೇನು ; ಹಾಗೂ ಈ ರೀತಿಯ ಸಹಭಾಗಿತ್ವಕ್ಕೆ ಒಳಪಡುವ ಖಾಸಗಿ ಸಂಸ್ಥೆಗಳಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯ ಸವಲತ್ತುಗಳು ಹಾಗೂ ಭೂಮಿ ನೀಡುವಿಕೆ ಹಾಗೂ ಹಣಕಾಸು ಸೌಲಭ್ಯಗಳೇನು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳನ್ನು ಸ್ಥಾಪಿಸಲು ರೈತರಿಗೆ ದೊರೆಯುವ ಸೌಲಭ್ಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೨ (೧೭೮೮) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಸಗಿ ರೇಷ್ಮೆ ಚಾಕಿ ಸಾಕಾಣಿಕಾ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; (ಹೆಸರು, ವಿಳಾಸ ಮತ್ತು ವಾರ್ಷಿಕ ಉತ್ಪಾದನಾ ಸಾಮರ್ಥ್ಯದ ಸಂಪೂರ್ಣ ವಿವರಗಳನ್ನು ಪ್ರತಿ ಕೇಂದ್ರಕ್ಕೆ ಸಂಬಂಧಿಸಿದಂತೆ ನೀಡುವುದು)

(ಆ) ರಾಜ್ಯದಲ್ಲಿ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ನಿಗಧಿಪಡಿಸಿರುವ ಮಾನದಂಡ ಹಾಗೂ ನಿಯಮಗಳೇನು ;

(ಇ) ಈ ರೀತಿಯ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದಿಂದ ದೊರೆಯುವ ಸಾಲ, ಸಹಾಯಧನ, ಪ್ರೋತ್ಸಾಹಧನ ಮುಂತಾದ ಸೌಲಭ್ಯಗಳ ಸಂಪೂರ್ಣ ವಿವರಗಳನ್ನು ಸಂಬಂಧಿಸಿದ ಆದೇಶದ ಪ್ರತಿಗಳೊಡನೆ ನೀಡುವುದು ;

(ಈ) ರಾಜ್ಯದಲ್ಲಿ ಇದುವರೆಗೂ ಎಷ್ಟು ಮತ್ತು ಯಾವ ಚಾಕಿ ಸಾಕಾಣಿಕಾ ಕೇಂದ್ರಗಳಿಗೆ ಸಾಲ ಸಹಾಯಧನ ಮುಂತಾದ ಸೌಲಭ್ಯಗಳನ್ನು ನೀಡಲಾಗಿದೆ ? (ಪ್ರತಿ ಕೇಂದ್ರದ ಹೆಸರು, ವಿಳಾಸ ಹಾಗೂ ದೊರೆತಿರುವ ಆರ್ಥಿಕ ಸೌಲಭ್ಯದ ಸಂಪೂರ್ಣ ವಿವರಗಳನ್ನು ಪ್ರತಿ ಕೇಂದ್ರವಾರು ನೀಡುವುದು)

## ಕೊಡಗು ಜಿಲ್ಲೆ ಮಡಿಕೇರಿ ನಗರಸಭೆಯ ತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಟೋನ್‌ಹಿಲ್ ನಿಂದ ನಗರದ ಹೊರಭಾಗಕ್ಕೆ ಸ್ಥಳಾಂತರಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೬೩ (೧೭೮೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯ ತನ್ನ ತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಟೋನ್‌ಹಿಲ್ ಎಂಬ ಪ್ರದೇಶದಲ್ಲಿ ಹೊಂದಿದ್ದು, ಸದರಿ ಘಟಕವು ಜನವಸತಿಯ ಮಧ್ಯಭಾಗದಲ್ಲಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಘಟಕವನ್ನು ಜನವಸತಿ ಪ್ರದೇಶದಿಂದ ದೂರದ ಪ್ರದೇಶಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಕ್ರಮ ಕೈಗೊಂಡಿದ್ದಲ್ಲಿ, ಸ್ಥಳಾಂತರದ ನಂತರ ಸದರಿ ಘಟಕವನ್ನು ಎಷ್ಟು ವಿಸ್ತೀರ್ಣದಲ್ಲಿ, ಯಾವ ಸ್ಥಳದಲ್ಲಿ ನಿರ್ಮಾಣ ಮಾಡಲಾಗುವುದು ?

## ಪೌರಾಡಳಿತ ಇಲಾಖೆಯ ಅಧೀನದಲ್ಲಿ ಬರುವ ನಿಗಮಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೫೬೪ (೧೮೪೪) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು ಶಾಸನಬದ್ಧ ಮಂಡಳಿಗಳು ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ;

ಅವು ಯಾವುವು ; ವಿವರವಾಗಿ ಇಲಾಖೆವಾರು, ಕೇಂದ್ರ ಕಚೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರ ಪುರಸ್ಕೃತ/ಪ್ರಾಯೋಜಿತ/ಇತರೆ ಯೋಜನೆಗಳಾವುವು ; ೨೦೧೯–೨೦ನೇ ಸಾಲಿನಲ್ಲಿ ಸದರಿ ಯೋಜನೆಗಳಿಗೆ ಎಷ್ಟು ಹಣ ಬಂದಿದೆ; ಇನ್ನೂ ಎಷ್ಟು ಹಣ ಬರಬೇಕಿದೆ ; ಯೋಜನಾವಾರು ಮಾಹಿತಿ ನೀಡುವುದು ;

(ಇ) ಕಳೆದ ೩ ವರ್ಷಗಳಿಂದ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ. ಇಟ್ಟಿವೆ ; ಎಫ್.ಡಿ. ಇಡಲು ಕಾರಣಗಳೇನು; ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ ; ವಿವರವಾದ ಮಾಹಿತಿ ನೀಡುವುದು ;

(ಈ) ಎಫ್.ಡಿ ಇಟ್ಟ ಹಣವನ್ನು ಸಂಬಂಧಪಟ್ಟ ಯೋಜನೆಗಳಿಗೆ ಯಾವಾಗ ಉಪಯೋಗಿಸಲಾಗುವುದು ಸಂಸ್ಥೆವಾರು ಮಾಹಿತಿ ನೀಡುವುದು ?

## ನಗರಾಭಿವೃದ್ಧಿ ಇಲಾಖೆಯ ಅಧೀನದಲ್ಲಿ ಬರುವ ನಿಗಮಗಳ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೫೬೫ (೧೮೪೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು,

ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ ; ಇವು ಯಾವುವು ; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ/ಪ್ರಾಯೋಜಿತ/ಇತರೆ ಯೋಜನೆಗಳಾವುವು ; ೨೦೧೯-೨೦೨೦ ನೇ ಸಾಲಿನಲ್ಲಿ ಸದರಿ ಯೋಜನೆಗಳಿಗೆ ಬಿಡುಗಡೆಯಾದ ಹಣ ಎಷ್ಟು ; ಇನ್ನೂ ಎಷ್ಟು ಹಣ ಬರಬೇಕಿದೆ; ಯೋಜನಾವಾರು ಮಾಹಿತಿ ನೀಡುವುದು ;

(ಇ) ಕಳೆದ ೩ ವರ್ಷಗಳಿಂದ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ. ಇಟ್ಟಿವೆ ; ಎಫ್.ಡಿ. ಇಡಲು ಕಾರಣಗಳೇನು ; ಇದಕ್ಕೆ ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಎಫ್.ಡಿ. ಇಟ್ಟ ಹಣವನ್ನು ಸಂಬಂಧಪಟ್ಟ ಯೋಜನೆಗಳಿಗೆ ಯಾವಾಗ ಉಪಯೋಗಿಸಲಾಗುವುದು ? (ಸಂಸ್ಥೆವಾರು ವಿವರವಾದ ಮಾಹಿತಿ ನೀಡುವುದು)

## ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೫೬೬(೧೮೪೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ ; ಅವು ಯಾವುವು ; ವಿವರವಾಗಿ ಇಲಾಖೆವಾರು, ಕೇಂದ್ರ ಕಚೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರ ಪುರಸ್ಕೃತ/ಪ್ರಾಯೋಜಿತ/ಇತರೆ ಯೋಜನೆಗಳಾವುವು ; ೨೦೧೯-೨೦ ನೇ ಸಾಲಿನಲ್ಲಿ ಸದರಿ ಯೋಜನೆಗಳಿಗೆ ಎಷ್ಟು ಹಣ ಬಂದಿದೆ; ಇನ್ನೂ ಎಷ್ಟು ಹಣ ಬರಬೇಕಿದೆ ; ಯೋಜನೆವಾರು ಮಾಹಿತಿ ನೀಡುವುದು;

(ಇ) ಕಳೆದ ೩ ವರ್ಷಗಳಿಂದ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ. ಇಟ್ಟಿವೆ ; ಎಫ್.ಡಿ. ಇಡಲು ಕಾರಣಗಳೇನು ; ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಎಫ್.ಡಿ. ಇಟ್ಟ ಹಣವನ್ನು ಸಂಬಂಧಪಟ್ಟ ಯೋಜನೆಗಳಿಗೆ ಯಾವಾಗ ಉಪಯೋಗಿಸಲಾಗುವುದು ; ಸಂಸ್ಥೆವಾರು ಮಾಹಿತಿ ನೀಡುವುದು ?

## ಸಹಕಾರ ಇಲಾಖೆಯ ಅಧೀನದಲ್ಲಿ ಬರುವ ನಿಗಮಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೫೬೭ (೧೮೪೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ ; ಅವು ಯಾವುವು ; ವಿವರವಾಗಿ ಇಲಾಖೆವಾರು, ಕೇಂದ್ರ ಕಚೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರ ಪುರಸ್ಕೃತ/ಪ್ರಾಯೋಜಿತ/ಇತರೆ ಯೋಜನೆಗಳಾವುವು ; ೨೦೧೯-೨೦ನೇ ಸಾಲಿನಲ್ಲಿ ಸದರಿ ಯೋಜನೆಗಳಿಗೆ ಎಷ್ಟು ಹಣ ಬಂದಿದೆ; ಇನ್ನೂ ಎಷ್ಟು ಹಣ ಬರಬೇಕಿದೆ ; (ಯೋಜನಾವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ. ಇಟ್ಟಿವೆ ; ಎಫ್.ಡಿ. ಇಡಲು ಕಾರಣಗಳೇನು ; ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಎಫ್.ಡಿ. ಇಟ್ಟ ಹಣವನ್ನು ಸಂಬಂಧಪಟ್ಟ ಯೋಜನೆಗಳಿಗೆ ಯಾವಾಗ ಉಪಯೋಗಿಸಲಾಗುವುದು ? (ಸಂಸ್ಥೆವಾರು ಮಾಹಿತಿ ನೀಡುವುದು)

## ನಗರೋತ್ಥಾನ ಯೋಜನೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೬೮ (೧೮೨೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಲ್ಲಿ ಕಾರವಾರ ಜಿಲ್ಲೆಗಳ ನಗರೋತ್ಥಾನ ಯೋಜನೆಗಳಿಗೆ ಮಂಜೂರಾದ ಅನುದಾನ ಎಷ್ಟು ;

(ಆ) ಕಾಮಗಾರಿಗಳ ಅನುಷ್ಠಾನಕ್ಕಾಗಿ ಯಾವ ಗುತ್ತಿಗೆದಾರರನ್ನು ಅಥವಾ ಏಜೆನ್ಸಿಯವರನ್ನು ನೇಮಕ ಮಾಡಲಾಗಿದೆ ; (ತಾಲ್ಲೂಕುವಾರು/ಜಿಲ್ಲಾವಾರು ಸವಿಸ್ತಾರ ವರದಿ ನೀಡುವುದು)

(ಇ) ನಿಗದಿತ ಅವಧಿ ಒಳಗೆ ಕಾಮಗಾರಿ ಪೂರ್ಣಗೊಳಿಸಲಾಗುವುದೇ; ಹಾಗಿದ್ದಲ್ಲಿ, ಗುತ್ತಿಗೆ ಕರಾರಿನ್ವಯ ಕಾಮಗಾರಿಗಳನ್ನು ಮುಕ್ತಾಯಗೊಳಿಸಲು ಸೂಚಿಸಿದ ದಿನಾಂಕವನ್ನು ಕಾಮಗಾರಿವಾರು ನೀಡುವುದು ; (ತಾಲ್ಲೂಕುವಾರು/ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಕಾಮಗಾರಿಗಳಲ್ಲಿ ಬಹಳಷ್ಟು ಅವ್ಯವಹಾರ ಆಗಿರುತ್ತದೆಯೆಂದು ತಿಳಿದು ಬಂದಿದ್ದು, ಇದಕ್ಕೆ ಹೊಣೆಗಾರರು ಯಾರು ; ಸಂಬಂಧಿಸಿದವರ ಮೇಲೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ರಾಜ್ಯದ ಘನತ್ಯಾಜ್ಯ ನಿರ್ವಹಣೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೫೬೯ (೧೮೫೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಘನತ್ಯಾಜ್ಯ ನಿರ್ವಹಣೆ ಇತ್ತೀಚೆಗೆ ಒಂದು ದೊಡ್ಡ ಸಮಸ್ಯೆಯಾಗಿದ್ದು ಅದರ ನಿರ್ವಹಣೆಗೆ ಫಲಪ್ರದ ಫಲಿತಾಂಶಗಳು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಎಷ್ಟು ಭಾಗಗಳಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿದೆ; ಅವುಗಳೆಲ್ಲವೂ ಹಾಲಿ ಕಾರ್ಯನಿರ್ವಹಿಸುವ ಸ್ಥಿತಿಯಲ್ಲಿವೆಯೇ ;

(ಇ) ಉಳಿದ ನಗರ ಕೇಂದ್ರಗಳಲ್ಲಿ ಯಾವ ಕಾಲಮಿತಿಯಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗುವುದು ; ಇದರ ನಿರ್ವಹಣೆಗಾಗಿ ಕೈಗೊಳ್ಳಲಾಗುವ ಕ್ರಮಗಳೇನು ;

(ಈ) ಈ ಯೋಜನೆಯ ರೂಪು-ರೇಷೆಗಳ ಬಗ್ಗೆ ವಿವರವಾದ ಮಾಹಿತಿ ನೀಡುವುದು ; ಸದರಿ ಯೋಜನೆಯ ಅನುಷ್ಠಾನಗಳಿಗೆ ಸರ್ಕಾರದಿಂದ ಎಷ್ಟು ಹಣವನ್ನು ಮೀಸಲಿಡಲಾಗಿದೆ ?

## ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ಯಮಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೫೭೦ (೧೮೫೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿ ಹಲವಾರು ಸಾರ್ವಜನಿಕ ಉದ್ಯಮಗಳಿದ್ದು, ಅದರಲ್ಲಿ ಕೆಲವು ಮಾತ್ರ ಲಾಭಗಳಿಸುತ್ತಿದ್ದು, ಉಳಿದವುಗಳು ದಿವಾಳಿ ಸ್ಥಿತಿಯಲ್ಲಿರುವುದಾಗಿ ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು ; ಹೆಸರಿನೊಂದಿಗೆ ವಿವರ ನೀಡುವುದು ;

(ಇ) ಈ ಒಟ್ಟು ಉದ್ಯಮಗಳಲ್ಲಿ ಲಾಭದಲ್ಲಿ ಪಡೆಯುತ್ತಿರುವ ಹಾಗೂ ನಷ್ಟ ಅನುಭವಿಸುತ್ತಿರುವ ಉದ್ಯಮಗಳ ಪಟ್ಟಿ ನೀಡುವುದು ;

(ಈ) ನಷ್ಟ ಅನುಭವಿಸುತ್ತಿರುವ ಉದ್ಯಮಗಳನ್ನು ಪುನಃಶ್ಚೇತನಗೊಳಿಸಲು ಪರ್ಯಾಯ ಮಾರ್ಗದ ಬಗ್ಗೆ ಸರ್ಕಾರ ಯೋಚಿಸಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿನ ಕೈಗಾರಿಕೆಗಳು ಹಾಗೂ ಉದ್ಯಮಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೭೧ (೧೮೫೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯವು ಕೈಗಾರಿಕೆ ಅನುಕೂಲಕರವಾದ ವಾತಾವರಣ ಹೊಂದಿದ್ದು, ಅದಕ್ಕನುಗುಣವಾಗಿ ಬಹುತೇಕ ಬಂಡವಾಳ ಹೂಡಿಕೆದಾರರು ಬೆಂಗಳೂರಿನಲ್ಲಿ ಹೂಡಿಕೆ ಮಾಡಲು ಆಸಕ್ತಿ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ನಿಟ್ಟಿನಲ್ಲಿ ಉದ್ಯಮಗಳನ್ನು ಸ್ಥಾಪಿಸಲು ಹೂಡಿಕೆದಾರರಿಗೆ ರಾಜ್ಯದ ಇತರ ಕಡೆಗಳಲ್ಲಿ ಅಗತ್ಯ ಮೂಲ ಸೌಕರ್ಯ ಒದಗಿಸುವುದರ ಅವಶ್ಯಕತೆ ಇರುವುದರ ಬಗ್ಗೆ ಸರ್ಕಾರದ ನಿಲುವೇನು ;

(ಇ) ಈ ಹಿನ್ನಲೆಯಲ್ಲಿ ಸರ್ಕಾರವು ಹೊಸ ಕೈಗಾರಿಕಾ ನೀತಿಯನ್ನು ಜಾರಿಗೆ ತರಲು ಯೋಜಿಸಿದೆಯೇ ; ಇದ್ದರೆ ವಿವರ ನೀಡುವುದು;

(ಈ) ಸಣ್ಣ ಮತ್ತು ಮಧ್ಯಮ ಉದ್ದಿಮೆದಾರರನ್ನು ಉತ್ತೇಜಿಸಲು ನೀಡುವ ಸಬ್ಸಿಡಿ ಮೊತ್ತ ಹೆಚ್ಚಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ?

## ಮಹಾನಗರ ಪಾಲಿಕೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೫೭೨ (೧೮೦೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ ; ಈ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಳೆದ ೫ ವರ್ಷಗಳಲ್ಲಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಸಲುವಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ;

(ಇ) ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಲ್ಟಿಪ್ಲೆಕ್ಸ್‌ಗಳಲ್ಲಿ ಮಾರಾಟ ಮಾಡುವ ವಸ್ತುಗಳ ದರ ಏರಿಕೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೫೭೩ (೧೮೧೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲ್ಟಿಪ್ಲೆಕ್ಸ್‌ಗಳಲ್ಲಿ ಮಾರಾಟ ಮಾಡುವ ತಿಂಡಿ–ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯಾಗಿ ಅಧಿಕ ದರ ವಿಧಿಸಲು ನಿಯಮಗಳಲ್ಲಿ ಅವಕಾಶವಿದೆಯೇ ;

(ಆ) ತಿಂಡಿ–ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವ ಮಲ್ಟಿಪ್ಲೆಕ್ಸ್‌ಗಳ ಲೈಸನ್ಸ್ ರದ್ದು ಮಾಡಲು ಸರ್ಕಾರ ಚಿಂತಿಸಿದೆಯೇ ; ಇಲ್ಲವಾದಲ್ಲಿ ಅಂತಹ ಮಲ್ಟಿಪ್ಲೆಕ್ಸ್‌ಗಳ ಮೇಲೆ ಯಾವ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ;

(ಇ) ಕಳೆದ ೨ ವರ್ಷಗಳಲ್ಲಿ ತಿಂಡಿ–ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವ ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳ ವಿರುದ್ಧ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯ ಕೃಷಿ ಮಾರುಕಟ್ಟೆ ಮಂಡಳಿಗೆ ನಷ್ಟ ಉಂಟಾಗಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೫೭೪ (೧೮೦೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯ ಅಧಿಕಾರಿಗಳ ಆಲಸ್ಯದಿಂದ/ನಿರ್ಲಕ್ಷ್ಯದಿಂದ ಕರ್ನಾಟಕ ರಾಜ್ಯ ಕೃಷಿ ಮಾರುಕಟ್ಟೆ ಮಂಡಳಿಗೆ ರೂ.೬೫೬.೦೬ ಕೋಟಿ ನಷ್ಟ ಉಂಟಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

(ಆ) ಪೂರೈಕೆ ಏಜೆನ್ಸಿಗಳಿಂದ ೧೫೫೮.೯೦ ಕೋಟಿ ಬಾಕಿ ಇದ್ದು, ಈ ಮೊತ್ತವನ್ನು ಇದುವರೆಗೂ ವಸೂಲು ಮಾಡಲು ಯಾವುದೇ ಕ್ರಮ ಕೈಗೊಳ್ಳದೆ ಪೂರೈಕೆ ಏಜೆನ್ಸಿಯವರೊಂದಿಗೆ ಶಾಮೀಲಾಗಿ ಅವ್ಯವಹಾರ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪೂರೈಕೆ ಏಜೆನ್ಸಿಗಳಿಂದ ಬಾಕಿ ವಸೂಲಿಗೆ ಕ್ರಮ ಕೈಗೊಳ್ಳದ ಅಧಿಕಾರಿಗಳ ಮೇಲೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಪೂರೈಕೆ ಏಜೆನ್ಸಿಗಳಿಂದ ಸರ್ಕಾರಕ್ಕೆ ಬರಬೇಕಾದ ಬಾಕಿ ಮೊತ್ತವೆಷ್ಟು ; ಏಜೆನ್ಸಿಯ ಹೆಸರಿನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು ?

## ಇ–ಹರಾಜು ಪ್ರಕ್ರಿಯೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೫೭೫(೧೮೧೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಇ–ಹರಾಜು ಪ್ರಕ್ರಿಯೆ ನಡೆಯುತ್ತಿದೆ ; ಭಾರತದ ಸರ್ಕಾರದ ಇ–ನ್ಯಾಮ್ ಮತ್ತು ಕರ್ನಾಟಕ ಸರ್ಕಾರದ ಇ–ಮಾರ್ಕೆಟ್ ವ್ಯವಸ್ಥೆಯಲ್ಲಿನ ವ್ಯತ್ಯಾಸಗಳೇನು ;

(ಆ) ಭಾರತ ಸರ್ಕಾರದ ಇ–ನ್ಯಾಮ್ ವ್ಯವಸ್ಥೆಯನ್ನು ಅಳವಡಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಿವೆ ; ಅದರಲ್ಲಿ ಎಷ್ಟು ಮಾರುಕಟ್ಟೆಗಳು ಮಾರುಕಟ್ಟೆ ವ್ಯವಸ್ಥೆಯನ್ನು ಅಳವಡಿಸಿಕೊಂಡಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಅಡಿಕೆ ಟಾಸ್ಕ್ ಫೋರ್ಸ್ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೫೭೬ (೧೮೬೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಬೆಳೆಗಾರರ ಸಮಸ್ಯೆ ಪರಿಹರಿಸಲು ಟಾಸ್ಕ್‌ಫೋರ್ಸ್ ರಚಿಸಲಾಗಿದೆಯೇ ; ರಚಿಸಲಾಗಿದ್ದಲ್ಲಿ, ಯಾವಾಗಿನಿಂದ ಅಸ್ತಿತ್ವಕ್ಕೆ ಬಂದಿದೆ ;

(ಆ) ಅಡಿಕೆ ಟಾಸ್ಕ್ ಫೋರ್ಸ್ ರಚನೆಯ ಉದ್ದೇಶ ಮತ್ತು ಕಾರ್ಯಸೂಚಿಗಳೇನು ;

(ಇ) ಅಡಿಕೆ ಬೆಳೆಯಿಂದ ರಾಜ್ಯ ಸರ್ಕಾರಕ್ಕೆ ಎಷ್ಟು ಮೊತ್ತದ ಆದಾಯ ಬರುತ್ತದೆ ; ಅಡಿಕೆ ಟಾಸ್ಕ್ ಫೋರ್ಸ್‌ಗೆ ಒದಗಿಸಲಾಗಿರುವ ಅನುದಾನ ಎಷ್ಟು ; ಈ ಮೊತ್ತವನ್ನು ಯಾವ ಯಾವ ಕಾರ್ಯಗಳಿಗೆ ವೆಚ್ಚ ಮಾಡಲಾಗುತ್ತದೆ ?

## ಮೈಸೂರು ನಗರದ ದೇವರಾಜ ಮಾರುಕಟ್ಟೆ ಮತ್ತು ಲ್ಯಾಂಡ್ಸ್‌ಡೌನ್ ಕಟ್ಟಡಗಳ ಪುನರ್ ನಿರ್ಮಾಣದ ಬಗ್ಗೆ

**ಶ್ರೀ ಎಸ್ ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೭೭ (೧೮೩೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ಪಾರಂಪರಿಕ ಕಟ್ಟಡಗಳಾದ ದೇವರಾಜ ಮಾರುಕಟ್ಟೆ ಮತ್ತು ಲ್ಯಾಂಡ್ಸ್‌ಡೌನ್ ಕಟ್ಟಡಗಳನ್ನು ನೆಲಸಮ ಮಾಡಿ ಹೊಸ ಕಟ್ಟಡ ನಿರ್ಮಿಸಲಾಗುವುದೇ ; ಈ ವಿಚಾರದಲ್ಲಿ ಘನ ಉಚ್ಛ ನ್ಯಾಯಾಲಯವು ನೀಡಿರುವ ತೀರ್ಪಿನ ಮುಖ್ಯಾಂಶಗಳೇನು ;

(ಆ) ಈ ಬಗ್ಗೆ ತಜ್ಞರು ವರದಿ ನೀಡಿದ್ದಾರೆಯೇ ; ಈ ಕಟ್ಟಡಗಳನ್ನು ಪರಂಪರೆಗೆ ಧಕ್ಕೆ ಬಾರದಂತೆ ದುರಸ್ಥಿಗೊಳಿಸಿ ಮೂಲ ರೂಪದಲ್ಲಿಯೇ ಉಳಿಸಿಕೊಳ್ಳಲಾಗುವುದೇ ಅಥವಾ ಮೂಲ ಸ್ವರೂಪದಲ್ಲಿ ಪುನರ್ ನಿರ್ಮಿಸಲಾಗುವುದೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ನಂಜನಗೂಡು ಪಟ್ಟಣದಲ್ಲಿ ಸಸ್ಯಕಾಶಿಯನ್ನು ನಿರ್ಮಿಸುವ ಬಗ್ಗೆ

**ಶ್ರೀ ಎಸ್ ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೭೮ (೧೮೩೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂಜನಗೂಡು ನಗರದಲ್ಲಿ ಸಸ್ಯಕಾಶಿ ನಿರ್ವಾಣಕ್ಕಾಗಿ ಗುರುತಿಸಿರುವ ಜಾಗದ ವಿಸ್ತೀರ್ಣ ಎಷ್ಟು ; ಈ ಜಾಗವನ್ನು ತೋಟಗಾರಿಕೆ ಇಲಾಖೆ ವಶಕ್ಕೆ ಪಡೆದು ಸಸ್ಯಕಾಶಿಗೆ ನೀಲನಕ್ಷೆಯನ್ನು ಸಿದ್ಧಪಡಿಸಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ಈ ಸಸ್ಯಕಾಶಿ ನಿರ್ಮಾಣದ ಅಂದಾಜು ವೆಚ್ಚ ಎಷ್ಟು ; ಪ್ರಸ್ತುತ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಯಾವ ಯಾವ ಮೂಲದಿಂದ ಅನುದಾನಗಳು ಬಂದಿವೆ ; ಯಾವ ಯಾವ ಕಾಮಗಾರಿಗಳನ್ನು ಆರಂಭಿಸಲಾಗಿದೆ ; ಕೂಡಲೇ ನೀಲನಕ್ಷೆಗೆ ಅನುಗುಣವಾಗಿ ಸಸ್ಯಕಾಶಿಯನ್ನು ನಿರ್ಮಿಸಿ ನಿರ್ಮಲ ಸ್ವಚ್ಛ ಪರಿಸರವನ್ನು ಕಲ್ಪಿಸಲು ಸರ್ಕಾರವು ಕೂಡಲೇ ಜರುಗಿಸುವುದೇ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0277/400 ಪ್ರತಿಗಳು/16–03–2020